ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com
ಸಂಪುಟ: 01 ಸಂಚಿಕೆ: 210
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಗುರುವಾರ: 30-07-2026

# ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ

## 13 ಮಂದಿಯ ವಿರುದ್ಧ 20 ಸಾವಿರ ಪುಟಗಳ ದೋಷಾರೋಪ ಪಟ್ಟಿ

### ಸಿಬಿಐ ಚಾರ್ಜ್‌ಶೀಟ್ ಸಲ್ಲಿಕೆ–ದೇಶಾದ್ಯಂತ ತ್ರೀವ ಸಂಚಲನ




**ನವದೆಹಲಿ,ಜು. 29:** ದೇಶಾದ್ಯಂತ ತೀವ್ರ ಆಕ್ರೋಶ ಹಾಗೂ ರಾಜಕೀಯ ಸಂಚಲನಕ್ಕೆ ಕಾರಣವಾಗಿದ್ದ ನೀಟ್ ಯುಜಿ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರೀಯ ತನಿಖಾ ದಳ (ಸಿಬಿಐ) ತನಿಖೆ ಚುರುಕುಗೊಳಿಸಿದ್ದು, ದೆಹಲಿ ವಿಶೇಷ ನ್ಯಾಯಾಲಯಕ್ಕೆ 13 ಮಂದಿ ಆರೋಪಿಗಳ ವಿರುದ್ಧ 20 ಸಾವಿರ ಪುಟಗಳ ದೋಷರೊಪಣ ಪಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದೆ.

ನೀಟ್ ಪ್ರಶ್ನೆ ಪತ್ರಿಕೆಗೆ ಸಂಬಂಧಿಸದಂತೆ ದೆಹಲಿಯ ಜಂತರ್–ಮಂತರ್ ಸೇರಿದಂತೆ ದೇಶದ ವಿವಿಧ ಭಾಗಗಳಲ್ಲಿ ಭಾರಿ ಪ್ರತಿಭಟನೆ ನಡೆಸಲಾಯಿತು,ಈ ಹಿನ್ನೆಲೆಯಲ್ಲಿ ಪ್ರಕರಣ ಕುರಿತತಂತೆ ಸಿಬಿಐ ತನಿಖೆಗೆ ವಹಿಸಲಾಗಿತ್ತು.

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಸಿಬಿಐ ಸಂಪೂರ್ಣ ತನಿಖೆ ನಡೆಸಿ ಪ್ರಶ್ನೆ ಪತ್ರಿಕೆ ಲೀಕ್ ಕಾರಣರಾದ ಕೆಲವರನ್ನು ಬಂಧಿಸಿ ದೋಷರೋಪಣ ಪಟ್ಟಿ ಸಿದ್ಧಪಡಿಸಿತ್ತು. ಅವರಲ್ಲಿ ಪ್ರಮುಖ ಆರೋಪಿಗಳಾದ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ಮೂವರು ವಿಷಯ ತಜ್ಞರು, ಕೋಚಿಂಗ್ ಸೆಂಟರ್‌ಗಳ ಮುಖ್ಯಸ್ಥರು ಹಾಗೂ ಮಧ್ಯವರ್ತಿಗಳು ಸೇರಿದಂತೆ 13 ಜನರನ್ನು ಪ್ರಕರಣದಲ್ಲಿ ಪ್ರಮುಖ ಆರೋಪಿಗಳನ್ನಾಗಿ ಹೆಸರಿಸಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಸಲ್ಲಿಸಿರುವ ದೋಷಾರೋಪ ಪಟ್ಟಿಯ ಪ್ರಕರಣ ಕುರಿತಂತೆ ಸಂಪೂರ್ಣ ವಿವರಗಳನ್ನು ದಾಖಲಿಸಲಾಗಿದೆ.

#### ಬೃಹತ್ ತನಿಖಾ ತಂಡ:

ಸಿಬಿಐ ಪ್ರಕರಣದ ತನಿಖೆಗಾಗಿ 72 ತನಿಖಾಧಿಕಾರಿಗಳು ಹಾಗೂ 8 ಸೈಬರ್ ಫೊರೆನ್ಸಿಕ್ ತಜ್ಞರನ್ನೊಳಗೊಂಡ ಬೃಹತ್ ತಂಡವನ್ನು ರಚಿಸಿತ್ತು. ಆರೋಪಿಗಳ ವಿರುದ್ಧ ಬಲವಾದ ಸಾಕ್ಷ್ಯಾಧಾರವಾಗಿ 360 ಸಾಕ್ಷಿಗಳು, 422 ದಾಖಲೆಗಳು ಹಾಗೂ 43 ವಸ್ತುನಿಷ್ಠ ಸಾಕ್ಷ್ಯಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. ಮಹಾರಾಷ್ಟ್ರ, ರಾಜಸ್ಥಾನ, ಹರಿಯಾಣ, ದೆಹಲಿ ಸೇರಿದಂತೆ ದೇಶದ 92 ವಿವಿಧ ಸ್ಥಳಗಳಲ್ಲಿ ಸಿಬಿಐ ದಾಳಿ ನಡೆಸಿ ಡಿಜಿಟಲ್ ಉಪಕರಣಗಳು, ಮೊಬೈಲ್ ಹಾಗೂ ದಾಖಲೆಗಳನ್ನು ವಶಪಡಿಸಿಕೊಂಡಿದೆ. ಬಂಧಿತರಾಗಿರುವ ಎಲ್ಲಾ 13 ಆರೋಪಿಗಳು ಪ್ರಸ್ತುತ ನ್ಯಾಯಾಂಗ ಬಂಧನದಲ್ಲಿದ್ದಾರೆ. ಅಕ್ರಮ ಹಣಕಾಸು ವ್ಯವಹಾರ ಪತ್ತೆಹಚ್ಚಿರುವ ತನಿಖಾ ಸಂಸ್ಥೆಯು ಆರೋಪಿಗಳಿಗೆ ಸೇರಿದ ಹಲವು ಬ್ಯಾಂಕ್ ಖಾತೆಗಳು, ಲಾಕರ್‌ಗಳು ಹಾಗೂ ಡಿಮ್ಯಾಟ್ ಖಾತೆಗಳನ್ನು ಫ್ರೀಜ್ ಮಾಡಿದೆ. ಆರೋಪಿಗಳ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ವಂಚನೆ , ನಂಬಿಕೆ ದ್ರೋಹ, ಸಾಕ್ಷ್ಯ ನಾಶ, ಭ್ರಷ್ಟಾಚಾರ ತಡೆ ಕಾಯ್ದೆ ಹಾಗೂ ಸಾರ್ವಜನಿಕ ಪರೀಕ್ಷಾ (ಅಕ್ರಮ ತಡೆ) ಕಾಯ್ದೆ, 2024 ರ ಅಡಿಯಲ್ಲಿ ಕಠಿಣ ಪ್ರಕರಣಗಳನ್ನು ದಾಖಲಿಸಲಾಗಿದೆ. ಸೋರಿಕೆಯ ಮೂಲವನ್ನು ತುದಿಯಿಂದ ತುದಿಯವರೆಗೆ ಪತ್ತೆಹಚ್ಚಲಾಗಿದ್ದು, ಇನ್ನುಳಿದ ಶಂಕಿತರು ಹಾಗೂ ಎನ್‌ಟಿಎ ಅಧಿಕಾರಿಗಳ ಪಾತ್ರದ ಕುರಿತು ಪೂರಕ ತನಿಖೆ ಮುಂದುವರಿದಿದೆ ಎಂದು ಸಿಬಿಐ ಮೂಲಗಳು ತಿಳಿಸಿವೆ.

#### ಸಿಬಿಐ ತನಿಖೆಯ ಪ್ರಮುಖ ಅಂಶಗಳು

–13 ಮಂದಿ ವಿರುದ್ಧ ದೋಷಾರೋಪ ಪಟ್ಟಿ
–20,000 ಪುಟಗಳ ಚಾರ್ಜ್‌ಶೀಟ್ ನ್ಯಾಯಾಲಯಕ್ಕೆ ಸಲ್ಲಿಕೆ
–360 ಸಾಕ್ಷಿಗಳು, 422 ದಾಖಲೆಗಳು,
–43 ವಸ್ತುನಿಷ್ಠ ಸಾಕ್ಷ್ಯಗಳು
–92 ಸ್ಥಳಗಳಲ್ಲಿ ಸಿಬಿಐ ದಾಳಿ
–72 ತನಿಖಾಧಿಕಾರಿಗಳು, 8 ಸೈಬರ್ ತಜ್ಞರ ತಂಡ
–ಬ್ಯಾಂಕ್ ಖಾತೆ, ಲಾಕರ್, ಡಿಮ್ಯಾಟ್ ಖಾತೆಗಳ ಫ್ರೀಜ್
–ಸಾರ್ವಜನಿಕ ಪರೀಕ್ಷಾ (ಅಕ್ರಮ ತಡೆ) ಕಾಯ್ದೆ–2024 ಅಡಿ ಪ್ರಕರಣ ದಾಖಲಿಕೆ


#### ವಿಷಯ ತಜ್ಞರೇ ಪ್ರಮುಖ ಆರೋಪಿಗಳು

–ಎನ್‌ಟಿಎ ವಿಷಯ ತಜ್ಞರು ಪಿ.ವಿ. ಕುಲಕರ್ಣಿ ಕೆಮಿಸ್ಟ್ರಿ (ರಸಾಯನಶಾಸ್ತ್ರ) ವಿಷಯ ತಜ್ಞ,
–ಮನಿಷಾ ಗುರುನಾಥ್ ಮಂಧಾರೆ ಬಯಾಲಜಿ (ಜೀವಶಾಸ್ತ್ರ) ವಿಷಯ ತಜ್ಞೆ,
–ಮನಿಷಾ ಸಂಜಯ್ ಹವಾಲ್ದಾರ್: ಫಿಸಿಕ್ಸ್ (ಭೌತಶಾಸ್ತ್ರ) ವಿಷಯ ತಜ್ಞೆ

#### ಕೋಚಿಂಗ್ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ವೈದ್ಯರು

ಡಾ. ಮನೋಜ್ ಶೀರೂರೆ ಲಾತೂರ್ ಮೂಲದ ವೈದ್ಯ, ತೇಜಸ್ ಹರ್ಷದ್ ಕುಮಾರ್ ಶಾ ಪುಣೆಯ 'ಎಪಿಎಮ್‌ಎ' ಕೋಚಿಂಗ್ ಸೆಂಟರ್‌ನ ಫಿಸಿಕ್ಸ್ ಬೋಧಕ ,ಶಿವರಾಜ್ ರಘುನಾಥ್ ಮೋಟೇಗಾಂವ್ಕರ್( ಲಾತೂರ್ ಮೂಲದ ಖಾಸಗಿ ಕೋಚಿಂಗ್ ಸೆಂಟರ್ ಮಾಲೀಕ)
ಯಶ್ ಯಾದವ್, ಮಾಂಗಿಲಾಲ್ ಬಿವಾಲ್, ದಿನೇಶ್ ಬಿವಾಲ್, ವಿಕಾಸ್ ಬಿವಾಲ್, ಶುಭಮ್ ಖೈರ್ನಾರ್, ಧನಂಜಯ್ ಲೋಖಂಡೆ ಮತ್ತು ಮನಿಷಾ ವಾಗ್ಮರೆ.

## ಇಂದು ರಾಮಾಯಣ ಚಿತ್ರದ ಟ್ರೇಲರ್ ಬಿಡುಗಡೆ




**ಮುಂಬೈ, ಜು. 29–** ನಿತೇಶ್ ತಿವಾರಿ ನಿರ್ದೇಶನದ ಬಹುನಿರೀಕ್ಷಿತ 'ರಾಮಾಯಣ' ಚಿತ್ರದ ಟ್ರೇಲರ್ ಬಿಡುಗಡೆ ದಿನಾಂಕವನ್ನು ನಿರ್ಮಾಪಕರು ಅಧಿಕೃತವಾಗಿ ಘೋಷಿಸಿದ್ದು, ಜುಲೈ 30 ರಂದು ಬೆಳಿಗ್ಗೆ 4:15 ಕ್ಕೆ ವಿಶ್ವಾದ್ಯಂತ ಟ್ರೇಲರ್ ಅನಾವರಣಗೊಳ್ಳಲಿದೆ. ಹಿಂದೂ ಸಂಪ್ರದಾಯದ ಪ್ರಕಾರ ಅತ್ಯಂತ ಪವಿತ್ರ ಹಾಗೂ ಶುಭವೆಂದು ಪರಿಗಣಿಸಲಾದ ಬ್ರಹ್ಮ ಮುಹೂರ್ತದ ವೇಳೆಯಲ್ಲೇ ಈ ಟ್ರೇಲರ್ ಬಿಡುಗಡೆಯಾಗುತ್ತಿರುವುದು ವಿಶೇಷವಾಗಿದೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಹೊಸ ಪೋಸ್ಟರ್ ಹಂಚಿಕೊಂಡಿರುವ ನಿರ್ಮಾಪಕ ನಮಿತ್ ಮಲ್ಹೋತ್ರಾ, ಶುಭ ಬ್ರಹ್ಮ ಮುಹೂರ್ತದಲ್ಲಿ ನಮ್ಮ ಟ್ರೇಲರ್‌ನೊಂದಿಗೆ ರಾಮಾಯಣದ ಹೊಸ ಉದಯವನ್ನು ಸ್ವಾಗತಿಸುತ್ತಿದ್ದೇವೆ ಎಂದು ತಿಳಿಸಿದ್ದಾರೆ. ಸಾಮಾನ್ಯವಾಗಿ ಬೆಳಿಗ್ಗೆ 4 ರಿಂದ 5 ಗಂಟೆಯವರೆಗಿನ ಅವಧಿಯನ್ನು ಬ್ರಹ್ಮ ಮುಹೂರ್ತವೆಂದು ಪರಿಗಣಿಸಲಾಗುತ್ತಿದ್ದು, ಯಾವುದೇ ಹೊಸ ಕಾರ್ಯಕ್ಕೆ ಇದು ಅತ್ಯಂತ ಸೂಕ್ತ ಸಮಯವಾಗಿರುವುದರಿಂದ ಭಾರತೀಯ ಸಂಸ್ಕೃತಿಯ ಅತಿದೊಡ್ಡ ಮಹಾಕಾವ್ಯ ಆಧಾರಿತ ಚಿತ್ರಕ್ಕೆ ಇದಕ್ಕಿಂತ ಉತ್ತಮ ಸಮಯ ಬೇರೊಂದಿಲ್ಲ ಎಂಬುದು ಚಿತ್ರತಂಡದ ನಂಬಿಕೆಯಾಗಿದೆ. ಈ ಬಹುನಿರೀಕ್ಷಿತ ಟ್ರೇಲರ್ ಹಿಂದಿ, ತಮಿಳು, ತೆಲುಗು, ಕನ್ನಡ ಮತ್ತು ಮಲಯಾಳಂ ಸೇರಿದಂತೆ ಹಲವು ಭಾಷೆಗಳಲ್ಲಿ ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳಲ್ಲಿ ಏಕಕಾಲದಲ್ಲಿ ಬಿಡುಗಡೆಯಾಗಲಿದೆ.
ಈ ದೃಶ್ಯ ಕಾವ್ಯದಲ್ಲಿ ಬಾಲಿವುಡ್ ಹಾಗೂ ದಕ್ಷಿಣ ಭಾರತ ಚಿತ್ರರಂಗದ ದೈತ್ಯ ತಾರಾಗಣವೇ ಒಂದಾಗುತ್ತಿದ್ದು, ರಣಬೀರ್ ಕಪೂರ್ ಶ್ರೀರಾಮನ ಪಾತ್ರದಲ್ಲಿ ಮತ್ತು ಸಾಯಿ ಪಲ್ಲವಿ ಸೀತಾದೇವಿಯ ಪಾತ್ರದಲ್ಲಿ ಅಭಿನಯಿಸುತ್ತಿದ್ದಾರೆ. ಹಾಗೆಯೇ ದಕ್ಷಿಣದ ಸೂಪರ್‌ಸ್ಟಾರ್ ಯಶ್ ರಾವಣನಾಗಿ 2ನೇ ಪುಟಕ್ಕೆ

### ಗುರುಪೂರ್ಣಿಮೆ ಮಹೋತ್ಸವದಲ್ಲಿ ಶೈಕ್ಷಣಿಕ ಸೇವೆಗೆ ಚಾಲನೆ

## ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ನೆರವು ನೀಡುವ ಯೋಜನೆ ಆರಂಭ: ಸಾಯಿ ಕಿರಣ ಆದೋನಿ



ಧೈರ್ಯದ ದಾರಿ

**ರಾಯಚೂರು, ಜು.29:** ಗುರುಪೂರ್ಣಿಮೆಯ ಅಂಗವಾಗಿ ನಗರದ ಓಂ ಸಾಯಿ ಧ್ಯಾನ ಮಂದಿರದಲ್ಲಿ ಬುಧವಾರ ಭಕ್ತಿಭಾವದಿಂದ ಗುರುಪೂರ್ಣಿಮಾ ಮಹೋತ್ಸವ ಆಚರಿಸಲಾಯಿತು. ಬೆಳಗ್ಗೆಯಿಂದಲೇ ಸಾವಿರಾರು ಭಕ್ತರು ಶ್ರೀ ಶಿರಡಿ ಸಾಯಿಬಾಬಾರ ದರ್ಶನ ಪಡೆದು ವಿಶೇಷ ಪೂಜೆಗಳಲ್ಲಿ ಪಾಲ್ಗೊಂಡರು. ಇದೇ ಸಂದರ್ಭದಲ್ಲಿ ಪ್ರತಿಭಾವಂತ ಹಾಗೂ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು ನೀಡುವ ಯೋಜನೆಗೂ ಚಾಲನೆ ನೀಡಲಾಯಿತು.
ಧ್ಯಾನ ಮಂದಿರದ ಸಂಸ್ಥಾಪಕ ಧರ್ಮಾಧಿಕಾರಿ ಸಾಯಿ ಕಿರಣ ಆದೋನಿ ಮಾತನಾಡಿ, ಗುರುಪೂರ್ಣಿಮೆಯು ಗುರು ಪರಂಪರೆಯನ್ನು ಸ್ಮರಿಸುವ ಪವಿತ್ರ ಹಬ್ಬವಾಗಿದೆ. ಧಾರ್ಮಿಕ ಆಚರಣೆಗಳ ಜೊತೆಗೆ ಸಮಾಜಮುಖಿ ಸೇವೆಗಳನ್ನು ಕೈಗೊಳ್ಳುವುದು ಸಾಯಿಬಾಬರ ಸಂದೇಶವಾಗಿದೆ ಎಂದು ಹೇಳಿದರು.
ಈ ಬಾರಿ ಮಹೋತ್ಸವದ ಪ್ರಮುಖ ಆಕರ್ಷಣೆಯಾಗಿ ಶಿರಡಿಯಿಂದ ತರಲಾಗಿರುವ ಶ್ರೀ ಸಾಯಿಬಾಬಾ ಧರಿಸಿದ್ದ ಪವಿತ್ರ ಕಾಫ್ನಿಯ ಸಾರ್ವಜನಿಕ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಪವಿತ್ರ ವಸ್ತ್ರದ ಸಮ್ಮುಖದಲ್ಲೇ ಸಮಾಜಕ್ಕೆ ಉಪಯುಕ್ತವಾಗುವ ಶಾಶ್ವತ ಸೇವಾ ಕಾರ್ಯ ಆರಂಭಿಸುವ ಸಂಕಲ್ಪದೊಂದಿಗೆ ಶ್ರೀ ಶಿರಡಿ ಸಾಯಿಬಾಬಾ ಸೇವಾ ಚಾರಿಟೇಬಲ್ ಟ್ರಸ್ಟ್, ಅಮೆರಿಕದ ಸಾಫ್ಟ್‌ವೇರ್ ಇಂಜಿನಿಯರ್ ಅಭಿಲಾಷ್ ಚಕ್ರಾ, ಸಂತೋಷ್ ಪಾಟೀಲ್ ಹಾಗೂ ಧರ್ಮರಾಜ್ ಗೌಡ ಅವರ ಸಹಯೋಗದಲ್ಲಿ ಶೈಕ್ಷಣಿಕ ನೆರವು ಯೋಜನೆ ಆರಂಭಿಸಲಾಗಿದೆ ಎಂದು ತಿಳಿಸಿದರು. ಕೋವಿಡ್ ಸಂಕಷ್ಟದ ಸಮಯದಲ್ಲಿ 25 ದಿನಗಳ ಕಾಲ ಅನ್ನಸಂತರ್ಪಣೆ ನಡೆಸಿದ ಅನುಭವವನ್ನು ಸ್ಮರಿಸಿದ ಅವರು, ಇದೀಗ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲು ಮುಂದಾಗಿದ್ದೇವೆ. ಮೊದಲ ಹಂತದಲ್ಲಿ ಪಿಯುಸಿ ದ್ವಿತೀಯ ವರ್ಷದ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಆರ್ಥಿಕವಾಗಿ ದುರ್ಬಲ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಲ್ಯಾಪ್‌ಟಾಪ್, ಕಂಪ್ಯೂಟರ್, ಟ್ಯಾಬ್ಲೆಟ್ ಸೇರಿದಂತೆ ಅಗತ್ಯ ಶೈಕ್ಷಣಿಕ ನೆರವು ನೀಡಲಾಗುವುದು ಎಂದರು.
ಈ ಯೋಜನೆಯಡಿ ಪಿಯುಸಿಯಲ್ಲಿ ಶೇ.90.33 ಅಂಕ ಗಳಿಸಿದ ಲಿಂಗಸುಗೂರು ತಾಲ್ಲೂಕಿನ ನರಸಿಂಹ–ವಿಜಯಲಕ್ಷ್ಮಿ ದಂಪತಿಯ ಪುತ್ರಿ ಪ್ರಜ್ಞಾ ಅವರಿಗೆ ಲ್ಯಾಪ್‌ಟಾಪ್ ವಿತರಿಸಿ ಗೌರವಿಸಲಾಯಿತು. ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸು ಸಾಧಿಸಿದ ಬಳಿಕ ತಮಗೆ ದೊರೆತ ನೆರವನ್ನು ಸಮಾಜಕ್ಕೆ ಮರಳಿ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು. ಪ್ರತಿಯೊಬ್ಬ ಫಲಾನುಭವಿಯೂ ಮುಂದೆ ಕನಿಷ್ಠ ಮೂವರು ವಿದ್ಯಾರ್ಥಿಗಳಿಗೆ ಸಹಾಯ ಮಾಡುವ ಸಂಕಲ್ಪ ಮಾಡಬೇಕು. ಹೀಗೆ ಸೇವೆಯ ಸರಪಳಿ ಮುಂದುವರಿದರೆ ಸಮಾಜದಲ್ಲಿ ಶಿಕ್ಷಣ ಮತ್ತು ಮಾನವೀಯ ಮೌಲ್ಯಗಳು ಮತ್ತಷ್ಟು ಬಲಗೊಳ್ಳುತ್ತವೆ ಎಂದು ಸಾಯಿ ಕಿರಣ ಆದೋನಿ ಹೇಳಿದರು. ಇದಕ್ಕೂ ಮುನ್ನ ಬೆಳಿಗ್ಗೆ 6 ಗಂಟೆಯಿಂದ 2ನೇಪುಟಕ್ಕೆ

### ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ವಿಶೇಷ ಗಮನಹರಿಸಲು ಸೂಚನೆ

## ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗೆ ಶ್ರಮಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ಧೈರ್ಯದ ದಾರಿ



**ರಾಯಚೂರು ಜುಲೈ 29:** ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಸುಧಾರಿಸಿ, ಜಿಲ್ಲೆಯನ್ನು ರಾಜ್ಯ ಫಲಿತಾಂಶದ ಅಗ್ರಸ್ಥಾನಕ್ಕೆ ತರುವಂತೆ ನೋಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳು ತಮ್ಮ ಜವಾಬ್ದಾರಿ ಅರಿತು ಶ್ರಮಿಸಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಸೂಚಿಸಿದರು.

ಜುಲೈ 28ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶೈಕ್ಷಣಿಕ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಉತ್ತಮಗೊಳಿಸಲು ಕೈಗೊಳ್ಳಬಹುದಾದ ಕ್ರಮ ಹಾಗೂ ರೂಪಿಸಿ ಅನುಷ್ಠಾನಗೊಳಿಸಬಹುದಾದ ಕಾರ್ಯಕ್ರಮಗಳ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಶಿಕ್ಷಕರು ಫಲಿತಾಂಶ ಹೆಚ್ಚಿಸಲು ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ವಿಶೇಷ ಗಮನಹರಿಸಿದಾಗ ಸಹಜವಾಗಿ ಉತ್ತಮ ಫಲಿತಾಂಶ ದೊರೆಯಲಿದೆ. ಮಕ್ಕಳ ಶೈಕ್ಷಣಿಕ ಕೌಟುಂಬಿಕ ವಾತಾವರಣ ಸರಿಯಾಗಿಲ್ಲ ಎನ್ನುವಂತಹ ಬಾಲಿಶ ಕಾರಣಗಳನ್ನು ಹೇಳದೇ ಮಕ್ಕಳ ಕಲಿಕೆಗೆ ಪೂರಕ ವಾತಾವರಣ ನಿರ್ಮಿಸುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ. ಈ ಕುರಿತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಶಿಕ್ಷಕರು ಕೂಡ ಮಕ್ಕಳ ಮಾನಸಿಕ ಸ್ಥಿತಿ–ಗತಿ, ಕಲಿಕೆಯಲ್ಲಿ ಅವರಿಗಿರುವ ಆಸಕ್ತಿ ಮುಂತಾದವುಗಳನ್ನು ಸೂಕ್ಷ್ಮ ಕ್ರಮವಾಗಿ ಗಮನಿಸಿ, ಅವರಿಗೆ ಅರ್ಥವಾಗುವ ರೀತಿಯಲ್ಲಿ ಬೋಧಿಸುವ ಅಗತ್ಯವಿದೆ. ಬೋಧನೆಗೆ ಹೊರಡುವ ಶಿಕ್ಷಕರು ಪೂರ್ವ ತಯಾರಿಯೊಂದಿಗೆ ತರಗತಿಗೆ ಹೋಗಬೇಕು. ಅದಕ್ಕೆ ಪೂರಕವಾಗಿ ಶಿಕ್ಷಕರು ತಮ್ಮ ಚಿಂತನೆ, ಆಲೋಚನೆ ಮತ್ತು ಬೋಧನಾ ಕ್ರಮಗಳಲ್ಲಿ ಬದಲಾವಣೆ ತಂದುಕೊಂಡು ತರಗತಿ ಆಕರ್ಷಕವಾಗಿರುವಂತೆ ನೋಡಿಕೊಳ್ಳಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸಲಹೆ ನೀಡಿದರು.
ಜಿಲ್ಲೆಯ ಎಲ್ಲಾ ತಾಲೂಕಿನ ಮಧ್ಯಾಹ್ನ ಉಪಹಾರ ಯೋಜನೆ, ಬಜೆಟ್ ಸಮಸ್ಯೆ, ಹಾಲಿನ ಕೊರತೆ ಹಾಗೂ ಇತರೆ ಖರ್ಚು ವೆಚ್ಚಗಳ ಕುರಿತು ಜಿಲ್ಲಾಧಿಕಾರಿಗಳು ಮಾಹಿತಿ ಪಡೆದರು. ನಂತರ ಜಿಲ್ಲೆಯ ಎಲ್ಲಾ ತಾಲೂಕಿನ ಸಿ.ಆರ್.ಪಿ, ಬಿ.ಆರ್.ಪಿ, ಬಿ.ಆರ್.ಸಿ ಹಾಗೂ ಸಹಾಯಕ ನಿರ್ದೇಶಕರು ಕಾಲಕಾಲಕ್ಕೆ ಶಾಲೆಗಳಿಗೆ ಭೇಟಿ ನೀಡಿ ತಪಾಸಣೆ ಮಾಡಬೇಕು.
ಅಗಸ್ಟ್ 17ರಂದು ನಡೆಯುವ ಸಭೆಗೆ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗಬೇಕು. ಅಲ್ಲದೆ ಕೆಲವು ಶಾಲೆಗಳಿಗೆ ಬಸ್ ಸೌಕರ್ಯ ಇಲ್ಲದೇ ಇರುವುದರಿಂದ ವಿದ್ಯಾರ್ಥಿಗಳು ನಡೆದುಕೊಂಡು ಬರುತ್ತಿರುವ ಕುರಿತು ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹರಿಬಿಡಲಾಗಿದೆ. ಈ ಬಗ್ಗೆ ಸೂಕ್ತ ಕ್ರಮವಹಿಸಿ, ವಿದ್ಯಾರ್ಥಿಗಳಿಗೆ ಬಸ್ ವ್ಯವಸ್ಥೆ ಮಾಡುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಕಳೆದ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ವಿಶ್ಲೇಷಣೆ ಮಾಡಿ, ರಾಯಚೂರು ಜಿಲ್ಲೆಯಲ್ಲಿ ಕಳೆದ ವರ್ಷ 28,076 ಸಾವಿರ ಮಕ್ಕಳು ಪರೀಕ್ಷೆಗೆ ಹಾಜರಾಗಿದ್ದು, ಅದರಲ್ಲಿ 26,205 ಉತ್ತೀರ್ಣರಾಗುವ 2ನೇಪುಟಕ್ಕೆ

ಮೊದಲನೇ ಪುಟದಿಂದ

## ಇಂದು ರಾಮಾಯಣ ಚಿತ್ರದ ಟ್ರೇಲರ್ ಬಿಡುಗಡೆ

ಅಬ್ಬರಿಸಲಿದ್ದು, ಸನ್ನಿ ಡಿಯೋಲ್ ಹನುಮಂತನಾಗಿ ಹಾಗೂ ರವಿ ದುಬೆ ಲಕ್ಷ್ಮಣನ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇವರ ಜೊತೆಗೆ ಅರುಣ್ ಗೋವಿಲ್, ಲಾರಾ ದತ್ತ, ರಾಕುಲ್ ಪ್ರೀತ್ ಸಿಂಗ್, ವಿವೇಕ್ ಒಬೆರಾಯ್ ಮತ್ತು ಕುನಾಲ್ ಕಪೂರ್ ಪ್ರಮುಖ ಪಾತ್ರಗಳಲ್ಲಿ ಸಾಥ್ ನೀಡಿದ್ದಾರೆ. ಈ ಬೃಹತ್ ಚಿತ್ರಕ್ಕೆ ಆಸ್ಕರ್ ಪ್ರಶಸ್ತಿ ವಿಜೇತರಾದ ಎ.ಆರ್. ರೆಹಮಾನ್ ಮತ್ತು ಹ್ಯಾನ್ಸ್ ಜಿಮ್ಮರ್ ಮೊದಲ ಬಾರಿಗೆ ಜೊತೆಯಾಗಿ ಹಿನ್ನೆಲೆ ಸಂಗೀತ ಸಂಯೋಜಿಸುತ್ತಿರುವುದು ದೊಡ್ಡ ಮಟ್ಟದ ಕುತೂಹಲ ಮೂಡಿಸಿದೆ. ನಮಿತ್ ಮಲ್ಹೋತ್ರಾ ಅವರ ಪ್ರೈಮ್ ಫೋಕಸ್ ಸ್ಟುಡಿಯೋಸ್ ಮತ್ತು ನಟ ಯಶ್ ಅವರ ಮಾನ್ಸ್ಟರ್ ಮೈಂಡ್ ಕ್ರಿಯೇಷನ್ಸ್ ಜಂಟಿಯಾಗಿ ನಿರ್ಮಿಸುತ್ತಿರುವ ಈ ಭವ್ಯ ಸಿನಿಮಾ ಎರಡು ಭಾಗಗಳಲ್ಲಿ ಮೂಡಿಬರಲಿದ್ದು, ಮೊದಲ ಭಾಗವು 2026 ರ ನವೆಂಬರ್‌ನಲ್ಲಿ ದೀಪಾವಳಿ ಹಬ್ಬದ ಶುಭ ಸಂದರ್ಭದಲ್ಲಿ ವಿಶ್ವದಾದ್ಯಂತ ಚಿತ್ರಮಂದಿರಗಳಲ್ಲಿ ಅದ್ದೂರಿಯಾಗಿ ಬಿಡುಗಡೆಯಾಗಲಿದೆ.

### ಗುರುಪೂರ್ಣಿಮೆ ಮಹೋತ್ಸವದಲ್ಲಿ ಶೈಕ್ಷಣಿಕ ಸೇವೆಗೆ ಚಾಲನೆ

## ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ನೆರವು ನೀಡುವ ಯೋಜನೆ ಆರಂಭ: ಸಾಯಿ ಕಿರಣ ಆದೋನಿ

ಶ್ರೀ ಸಾಯಿಬಾಬಾರಿಗೆ ವಿಶೇಷ ಪೂಜೆ, ಅಭಿಷೇಕ, ಪುಷ್ಪಾಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ನೆರವೇರಿದವು. ಮಧ್ಯಾಹ್ನ ಮಹಾ ಸಾಯಿ ಆರತಿ ನಡೆದ ಬಳಿಕ ಸಾವಿರಾರು ಭಕ್ತರಿಗೆ ಮಹಾ ಅನ್ನಸಂತರ್ಪಣೆ ಏರ್ಪಡಿಸಲಾಯಿತು. ಸಂಗೀತೋತ್ಸವ, ಭಜನೆ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಆಧ್ಯಾತ್ಮಿಕ ಪ್ರವಚನಗಳು ಮಹೋತ್ಸವಕ್ಕೆ ವಿಶೇಷ ಮೆರುಗು ತಂದವು. ಎರಡು ದಿನಗಳ ಕಾಲ ನಡೆಯುವ ಈ ಮಹೋತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸುತ್ತಿದ್ದಾರೆ.

### ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ವಿಶೇಷ ಗಮನಹರಿಸಲು ಸೂಚನೆ

## ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗೆ ಶ್ರಮಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ಮೂಲಕ ರಾಯಚೂರು ಜಿಲ್ಲೆಯು ಶೇ.94.41 ಸ್ಥಾನ ಪಡೆದಿರುತ್ತದೆ. 134 ಶಾಲೆಗಳು ಶೇ.100 ಫಲಿತಾಂಶ ಪಡೆದದಿದ್ದು, ಗ್ರಾಮೀಣ ವಿಭಾಗದಲ್ಲಿ 8,496 ಒಟ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಅದರಲ್ಲಿ ಗಂಡು 3,732 (ಶೇ.96.65) ಹೆಣ್ಣು–4,129 (ಶೇ.94.32) ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. 3 ರಿಂದ 7 ದಿನದ ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶನಕರಾದ ಮಲ್ಲಿಕಾರ್ಜುನ ಅವರು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲೆಯ ವಿವಿಧ ತಾಲೂಕಿನ ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ ಅಧಿಕಾರಿಗಳು, ಎಸ್.ಎಸ್.ಕೆ ಜಿಲ್ಲಾ ಯೋಜನಾ ಉಪಸಮನ್ವಯಾಧಿಕಾರಿಗಳು, ಎಸ್.ಎಸ್.ಎಲ್.ಸಿ ಜಿಲ್ಲಾ ನೋಡಲ್ ಅಧಿಕಾರಿಗಳು, ದೈಹಿಕ ಜಿಲ್ಲಾ ಶಿಕ್ಷಣಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

## ಮಾನವ ಕಲ್ಯಾಣವೇ ಎಲ್ಲದರ ಕೇಂದ್ರ ಬಿಂದು



**ಕಲಬುರಗಿ,ಜು 29:** ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲರ ನುಡಿಯಾದ "ಈ ಭೂಮಿಯ ಮೇಲೆ ನಾವು ಕೈಲಾಸ ಕಾಣಬೇಕಾದರೆ ಎಲ್ಲ ಸಾಧನೆ, ಸಂಶೋಧನೆ, ಸಂವಿಧಾನ, ಜ್ಞಾನ, ವಿಜ್ಞಾನ, ಧರ್ಮ ಮತ್ತು ವ್ಯವಸ್ಥೆಗಳು ಮಾನವ ಕಲ್ಯಾಣದ ಕೇಂದ್ರ ಬಿಂದುಗಳಾಗಬೇಕು" ಎಂಬುದನ್ನು ಸುದೀರ್ಘವಾಗಿ ವಿವರಿಸುತ್ತಾ ನಮ್ಮ ಶಿಕ್ಷಣ ಕೇವಲ ಸ್ವಾರ್ಥಕ್ಕಾಗಿ ಅಲ್ಲ, ಸಮಾಜ ಹಾಗು ರಾಷ್ಟ್ರದ ಅಭಿವೃದ್ಧಿಗಾಗಿ ಮತ್ತು ಮನುಕುಲದ ಏಳ್ಗೆಗಾಗಿ ಎಂಬುದನ್ನು ನ್ಯಾಯಮೂರ್ತಿಗಳು ನಡೆದು ತೋರಿಸಿದ್ದಾರೆ ಎಂದರು.

"ಸ್ವರ್ಗ ಮತ್ತು ನರಕಗಳು ಎಲ್ಲೋ ದೂರದಲ್ಲಿಲ್ಲ, ಅವು ಈ ಭೂಮಿಯ ಮೇಲೆಯೇ ಇವೆ. ಮನುಷ್ಯ ತನ್ನ ಸದಾಚಾರ, ಎಚ್ಚರಿಕೆಯ ಬದುಕು ಹಾಗೂ ಶ್ರದ್ಧೆಯ ಮೂಲಕವೇ ಈ ಧರೆಯನ್ನು ಕೈಲಾಸವನ್ನಾಗಿ ಪರಿವರ್ತಿಸಬಹುದು" ಎಂದು ಕಲ್ಯಾಣ ಆಶ್ರಮದ ಪೂಜ್ಯ ಮಹಾಂತ ಸ್ವಾಮೀಜಿಯವರು ತಿಳಿಸಿದರು.

ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ್ ಪ್ರತಿಷ್ಠಾನ ರಾಯಚೂರು, ಕಲಬುರ್ಗಿಯ ಸರ್ವಜ್ಞ ಮತ್ತು ಜಸ್ಟಿಸ್ ಶಿವರಾಜ ಪಾಟೀಲ್ ಪದವಿ ಪೂರ್ವ ವಿಜ್ಞಾನ ಮಹಾವಿದ್ಯಾಲಯ ಹಾಗೂ ಸರ್ವಜ್ಞ ಆಂಗ್ಲ ಮಾಧ್ಯಮ ಶಾಲೆಯ ಸಂಯುಕ್ತಾಶ್ರಯದಲ್ಲಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ನ್ಯಾಯಮೂರ್ತಿಗಳ "ಮುಂಜಾವಿಗೊಂದು ನುಡಿ ಕಿರಣ–365ಗಳ ದರ್ಶನ" ಎಂಬ 9 ದಿನಗಳ ವಿಶೇಷ ಉಪನ್ಯಾಸ ಮಾಲಿಕೆಯ ಐದನೇ ದಿನವು ಅರ್ಥಪೂರ್ಣವಾಗಿತ್ತು.

ಸತ್ಯವನ್ನು ನುಡಿಯುವುದು ಹಾಗು ನಮ್ಮ ಒಳ್ಳೆಯ ನಡತೆಯೇ ಸ್ವರ್ಗ, ಕೆಟ್ಟ ನಡತೆಯೇ ನರಕ ಎಂದು ಇಂದಿನ ಯುವ ಪೀಳಿಗೆಗೆ ಮನದಟ್ಟಾಗಬೇಕು. ರಾಷ್ಟ್ರಕವಿ ಕುವೆಂಪು ಅವರು 'ಪುಣ್ಯದಾಲಯವದು ಪೃಥ್ವಿ, ಸ್ವರ್ಗವದು ಪರದೇಶೀ' ಎಂದಿದ್ದಾರೆ. ಅಂದರೆ ನಮ್ಮ ಕಣ್ಣಿಗೆ ಕಾಣುವ ಈ ಭೂಮಿಯೇ ನಿಜವಾದ ಪುಣ್ಯದ ಆಲಯ ಮತ್ತು ಸ್ವರ್ಗವಾಗಿದೆ. ಕಣ್ಣಿಗೆ ಕಾಣದೇ ಇರುವುದು ಪರದೇಶೀ ಎಂದು ಹೇಳಿದ್ದಾರೆ.

ಸ್ವಾಮಿ ವಿವೇಕಾನಂದರ "ಏಳಿ, ಎದ್ದೇಳಿ, ಗುರಿ ಮುಟ್ಟುವವರೆಗೆ ನಿಲ್ಲದಿರಿ" ಎಂಬ ಜಾಗೃತಿ ಕರೆ ಹಾಗೂ ಉಪನಿಷತ್ತಿನ "ಉತ್ತಿಷ್ಠತ ಜಾಗ್ರತ ಪ್ರಾಪ್ಯ ವರನ್ನಿಬೋಧತ" ಎಂಬ ಮಂತ್ರದ ಮೂಲಕ ನಿರಂತರವಾಗಿ ಎಚ್ಚರದಿಂದಿದ್ದು ಗುರಿಯತ್ತ ಸಾಗಲು ವಿದ್ಯಾರ್ಥಿಗಳಿಗೆ ಪ್ರೇರೇಪಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಸಂಸ್ಥಾಪಕರಾದ ಪ್ರೊ. ಚನ್ನಾರೆಡ್ಡಿ ಪಾಟೀಲ್, ಮುಖ್ಯ ಶೈಕ್ಷಣಿಕ ನಿರ್ದೇಶಕ ಅಭಿಷೇಕ್ ಚನ್ನಾರೆಡ್ಡಿ ಪಾಟೀಲ್, ಗೀತಾ ಚನ್ನಾರೆಡ್ಡಿ ಪಾಟೀಲ, ಪ್ರಾಂಶುಪಾಲ ಪ್ರಶಾಂತ್ ಕುಲಕರ್ಣಿ,ವಿನೂತಾ ಆರ್.ಬಿ., ಅನಿತಾ ಕುಲಕರ್ಣಿ, ಪ್ರಭುಗೌಡ ಸಿದ್ಧಾರೆಡ್ಡಿ, ಕರುಣೇಶ ಹಿರೇಮಠ, ಗುರುರಾಜ ಕುಲಕರ್ಣಿ ಸೇರಿದಂತೆ ಉಪನ್ಯಾಸಕರು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು

## ಸ್ವಾತಂತ್ರ್ಯ ದಿನಾಚರಣೆಗೆ ಸಕಲ ಸಿದ್ಧತೆ ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ



**ವಿಜಯಪುರ, ಜು. 29:** ಆಗಸ್ಟ್ 15ರಂದು ಜಿಲ್ಲಾಡಳಿತದ ವತಿಯಿಂದ ಆಯೋಜಿಸಲಾಗುವ ಜಿಲ್ಲಾ ಮಟ್ಟದ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಅಚ್ಚುಕಟ್ಟಾಗಿ, ಶಿಸ್ತುಬದ್ಧವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯವಿರುವ ಎಲ್ಲಾ ಪೂರ್ವಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಸಂಬಂಧಿತ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಆಗಸ್ಟ್ 15ರಂದು ಜಿಲ್ಲಾ ಮಟ್ಟದ ಸ್ವಾತಂತ್ರ್ಯ ದಿನಾಚರಣೆ ನಡೆಯಲಿದ್ದು, ಕಾರ್ಯಕ್ರಮದ ಯಶಸ್ವಿ ಆಯೋಜನೆಗೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಸಮಾರಂಭಕ್ಕೆ ಆಗಮಿಸುವ ಗಣ್ಯರು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ವೇದಿಕೆ ನಿರ್ಮಾಣ, ಆಸನ ವ್ಯವಸ್ಥೆ, ಕುಡಿಯುವ ನೀರು, ವಿದ್ಯುತ್, ಸ್ವಚ್ಛತೆ, ವಾಹನ ನಿಲುಗಡೆ, ಭದ್ರತೆ, ಆರೋಗ್ಯ ಸೇವೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಮುಂಚಿತವಾಗಿಯೇ ಸಿದ್ಧಪಡಿಸುವಂತೆ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಧ್ವಜಾರೋಹಣ, ಪಥಸಂಚಲನ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳ ಭಾಗವಹಿಸುವಿಕೆಗೆ ಸಂಬಂಧಿಸಿದಂತೆ ಸಮರ್ಪಕ ಪೂರ್ವಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚಿಸಿದ ಜಿಲ್ಲಾಧಿಕಾರಿಗಳು, ಇದೇ ದಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿ ಇರುವ ಹಿನ್ನೆಲೆಯಲ್ಲಿ ಆ ಕಾರ್ಯಕ್ರಮಕ್ಕೂ ಅಗತ್ಯ ಸಿದ್ಧತೆಗಳನ್ನು ಸಕಾಲದಲ್ಲಿ ಪೂರ್ಣಗೊಳಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಪ್ರೊಬೇಷನರಿ ಐಪಿಎಸ್ ಅಧಿಕಾರಿ ಅಭಿಷೇಕ ಸೆಹರಾ, ಅಪರ ಜಿಲ್ಲಾಧಿಕಾರಿ ಡಾ. ಓದ್ರಾಮ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘ–ಸಂಸ್ಥೆಗಳ ಮುಖಂಡರು ಉಪಸ್ಥಿತರಿದ್ದರು.

## ಜುಲೈ 30ರಂದು ಚಂದ್ರಬಂಡ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು ಜುಲೈ 29:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಚಂದ್ರಬಂಡ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜುಲೈ 30ರ ಬೆಳಿಗ್ಗೆ 10ರಿಂದ ಸಂಜೆ 4ರವರೆಗೆ ಚಂದ್ರಬಂಡ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ಮಹಾನಗರ ಪಾಲಿಕೆ: ವೈಯಕ್ತಿಕ ಸೌಲಭ್ಯಕ್ಕೆ ಅರ್ಜಿ ಆಹ್ವಾನ


**ರಾಯಚೂರು ಜುಲೈ 29:** ರಾಯಚೂರು ಮಹಾನಗರ ಪಾಲಿಕೆ ವತಿಯಿಂದ 2024–25, 2025–26ನೇ ಸಾಲಿನ ಮಹಾನಗರ ಪಾಲಿಕೆ ಅನುಧಾನದಲ್ಲಿ ಶೇ.7.25 ಯೋಜನೆಯ ಇತರೆ ಹಿಂದುಳಿದ ಜನಾಂಗದ ವೈಯಕ್ತಿಕ ಚಟುವಟಿಕೆಯಡಿ ಸೌಲಭ್ಯ ಒದಗಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2024–25ನೇ ಸಾಲಿನ ಶೇ.40ರಷ್ಟು ವೈಯಕ್ತಿಕ ಚಟುವಟಿಕೆಗಾಗಿ ಇತರೆ ಹಿಂದುಳಿದ ಜನಾಂಗದ ಬಿ.ಇಡಿ/ಬಿಪಿಇಎಡ್ ಇತರೆ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ನೀಡುವುದು ಒಬ್ಬರಿಗೆ ರೂ.6000*13 ಹಾಗೂ 2025–26ನೇ ಸಾಲಿನ ಶೇ.40 ರಷ್ಟು ವೈಯಕ್ತಿಕ ಚಟುವಟಿಕೆಗಾಗಿ ಇತರೆ ಹಿಂದುಳಿದ ಜನಾಂಗದ ಬಿ.ಇಡಿ/ಬಿಪಿಇಎಡ್ ಇತರೆ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ನೀಡುವುದು ಒಬ್ಬರಿಗೆ ರೂ.6000*19 ಜನರಿಗೆ ನೀಡಲಾಗುವುದು.

ಆಸಕ್ತರು ನಿಗದಿತ ನಮೂನೆಯಲ್ಲಿ ಅರ್ಜಿ, ಬಾವಚಿತ್ರ–1, ಹಿಂದಿನ ವರ್ಷದ ಅಂಕ ಪಟ್ಟಿ, ಅದ್ಯಯನ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರ, ಪ್ರವೇಶ ರಶೀದಿ, ಬ್ಯಾಂಕ್ ಪಾಸ್ ಬುಕ್‌ನೊಂದಿಗೆ ಆಗಸ್ಟ್ 12ರ ಸಂಜೆ 5 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೆ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೆ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೆಬ್‌ಸೈಟ್ ವಿಳಾಸ: www.raichurcity.gov.in ನೋಟಿಫೀಕೇಶನಲ್ಲಿ ನೋಟ ಮಾಡಿ ಅಥವಾ ಕಚೇರಿಯ ನೋಟಿಸ್ ಬೋರ್ಡ್ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್‌ಲೈನ್ ದ್ರಾಕ್ಷಿ ವ್ಯಾಪಾರಕ್ಕೆ ಯತ್ನಾಳ ಒತ್ತು



**ವಿಜಯಪುರ, ಜು. 29:** ದ್ರಾಕ್ಷಿ ಬೆಳೆಗಾರರಿಗೆ ಪಾರದರ್ಶಕ ಹಾಗೂ ನ್ಯಾಯಸಮ್ಮತ ವಹಿವಾಟು ಒದಗಿಸುವ ಉದ್ದೇಶದಿಂದ ವಾರದಲ್ಲಿ ಎರಡು ದಿನ ಕಡ್ಡಾಯವಾಗಿ ಆನ್‌ಲೈನ್ ಟ್ರೇಡಿಂಗ್ ವ್ಯವಸ್ಥೆಯಲ್ಲೇ ಒಣ ದ್ರಾಕ್ಷಿ ವ್ಯಾಪಾರ ನಡೆಸಬೇಕು ಎಂದು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಎಪಿಎಂಸಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣದಲ್ಲಿ ಮಂಗಳವಾರ ನಡೆದ ದ್ರಾಕ್ಷಿ ಬೆಳೆಗಾರರ ಸಭೆಯಲ್ಲಿ ಮಾತನಾಡಿದ ಅವರು, ತೂಕದಲ್ಲಿ ಮೋಸ, ಹರಾಜಿನ ನೆಪದಲ್ಲಿ ಅನಗತ್ಯ ತೂರಾಟ ಹಾಗೂ ರೈತರ ಉತ್ಪನ್ನ ಹಾಳಾಗುವುದನ್ನು ತಡೆಯಲು ಆನ್‌ಲೈನ್ ವ್ಯಾಪಾರ ವ್ಯವಸ್ಥೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ತಾತ್ಕಾಲಿಕವಾಗಿ ವಾರದಲ್ಲಿ ಒಂದು ದಿನ ಮಾತ್ರ ಆನ್‌ಲೈನ್ ವಹಿವಾಟು ನಡೆಸಲು ಅವಕಾಶ ನೀಡಲಾಗುವುದು. ಆದರೆ ಆನ್‌ಲೈನ್ ವ್ಯವಹಾರವೂ ಆನ್‌ಲೈನ್ ಟ್ರೇಡಿಂಗ್‌ನ ನಿಯಮಾವಳಿ ಮತ್ತು ಮಾರ್ಗಸೂಚಿಗಳ ಅನುಸಾರವೇ ನಡೆಯಬೇಕು ಎಂದು ಸ್ಪಷ್ಟಪಡಿಸಿದರು.

ಆನ್‌ಲೈನ್ ಮಾರುಕಟ್ಟೆಯಿಂದ ರೈತರಿಗೆ ಯಾವುದೇ ರೀತಿಯ ಮೋಸವಾಗುವುದಿಲ್ಲ. ಇದರಿಂದ ರೈತರು ವರ್ತಕರಿಗೆ ಪಾವತಿಸುತ್ತಿದ್ದ ಶೇ.2ರಷ್ಟು ಕಮಿಷನ್ ಕೂಡ ಉಳಿಯಲಿದೆ. ಆದ್ದರಿಂದ ರೈತರು ಹಾಗೂ ವರ್ತಕರ ಹಿತಕ್ಕೆ ವಿರುದ್ಧವಾಗಿರುವ ಖಾಸಗಿ ಅಸೋಸಿಯೇಷಷನ ನಿಯಮಗಳನ್ನು ತಕ್ಷಣವೇ ರದ್ದುಪಡಿಸಬೇಕು ಎಂದು ಅವರು ಒತ್ತಾಯಿಸಿದರು.

ಎಪಿಎಂಸಿ ಅಧಿಕಾರಿಗಳ ಸಮ್ಮುಖದಲ್ಲೇ ವ್ಯಾಪಾರ ನಡೆಯುವುದರಿಂದ ವಹಿವಾಟಿನ ಸಂಪೂರ್ಣ ಮಾಹಿತಿ ಸರ್ಕಾರಕ್ಕೆ ಲಭ್ಯವಾಗುತ್ತದೆ. ಇದರಿಂದ ಸೆಸ್ ಹಾಗೂ ಜಿಎಸ್‌ಟಿ ರೂಪದಲ್ಲಿ ಸರ್ಕಾರಕ್ಕೂ ಹೆಚ್ಚಿನ ಆದಾಯ ದೊರೆಯಲಿದೆ. ಎಪಿಎಂಸಿ ಪರವಾನಗಿ ಹೊಂದಿರುವ ಪ್ರತಿಯೊಬ್ಬ ವರ್ತಕರಿಗೂ ಆನ್‌ಲೈನ್ ಹಾಗೂ ಆನ್‌ಲೈನ್ ಎರಡೂ ವ್ಯವಸ್ಥೆಗಳಲ್ಲಿ ಖರೀದಿಗೆ ಅವಕಾಶ ಕಲ್ಪಿಸಬೇಕು. ಹೊಸ ಪರವಾನಗಿ ಕೋರುವ ಅರ್ಜಿದಾರರಿಗೆ ಅನಗತ್ಯ ತೊಂದರೆ ನೀಡದೆ ನಿಯಮಾನುಸಾರ ಪರವಾನಗಿ ನೀಡಬೇಕು ಎಂದು ಸೂಚಿಸಿದರು.

ಹೆಚ್ಚಿನ ಸಂಖ್ಯೆಯಲ್ಲಿ ವರ್ತಕರು ಭಾಗವಹಿಸಿದರೆ ಸ್ಪರ್ಧಾತ್ಮಕ ವಾತಾವರಣ ನಿರ್ಮಾಣವಾಗಿ ರೈತರಿಗೆ ಉತ್ತಮ ಬೆಲೆ ದೊರೆಯುತ್ತದೆ. ಜೊತೆಗೆ ರಾಜ್ಯದ ಹೊರಗೆ ಹೋಗುತ್ತಿರುವ ವ್ಯಾಪಾರವನ್ನು ವಿಜಯಪುರದಲ್ಲೇ ಉಳಿಸಿಕೊಳ್ಳಲು ಸಹಕಾರಿಯಾಗಲಿದೆ ಎಂದರು.ದೇಶದ ಯಾವುದೇ ರಾಜ್ಯದ ವರ್ತಕರು ಆನ್‌ಲೈನ್ ಮತ್ತು ಆನ್‌ಲೈನ್ ವಹಿವಾಟಿನಲ್ಲಿ ಭಾಗವಹಿಸಲು ಅವಕಾಶವಿದ್ದು, ಎಲ್ಲರೂ ಇದರ ಪ್ರಯೋಜನ ಪಡೆಯಬೇಕು. ವಿಜಯಪುರದಲ್ಲಿ ನಿರ್ಮಾಣವಾಗುತ್ತಿರುವ 140 ಎಕರೆ ವಿಸ್ತೀರ್ಣದ ವೈನ್ ಪಾರ್ಕಗೆ ಈ ಆನ್‌ಲೈನ್ ಟ್ರೇಡಿಂಗ್ ವ್ಯವಸ್ಥೆ ಭದ್ರ ಅಡಿಪಾಯವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸಭೆಯಲ್ಲಿ ವಾರಕ್ಕೆ ಎರಡು ದಿನ ಆನ್‌ಲೈನ್ ಹಾಗೂ ತಾತ್ಕಾಲಿಕವಾಗಿ ಒಂದು ದಿನ ಆನ್‌ಲೈನ್ ಮೂಲಕ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿಯಲ್ಲಿ ನಿರ್ಮಿಸಲಾದ ಟ್ರೇಡಿಂಗ್ ಮಾರುಕಟ್ಟೆ ಆವರಣದಲ್ಲೇ ವಹಿವಾಟು ನಡೆಸುವುದು ಹಾಗೂ ಖಾಸಗಿ ಅಸೋಸಿಯೇಷನ ಕಾನೂನುಬಾಹಿರ ನಿಯಮಗಳನ್ನು ರದ್ದುಪಡಿಸುವ ಕುರಿತು ಸರ್ವಾನುಮತದ ನಿರ್ಣಯ ಕೈಗೊಂಡು ಠರಾವು ಅಂಗೀಕರಿಸಲಾಯಿತು. ಸಭೆಯಲ್ಲಿ ದ್ರಾಕ್ಷಿ ಮತ್ತು ವೈನ್ ಬೋರ್ಡ್ ಮಾಜಿ ಅಧ್ಯಕ್ಷ ಎಂ.ಎಸ್. ರುದ್ರಗೌಡ, ದ್ರಾಕ್ಷಿ ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಅಭಯಕುಮಾರ ನಾಂದ್ರೇಕರ, ಜಿಲ್ಲಾಧ್ಯಕ್ಷ ಎಂ.ಎಸ್. ಲೋಣಿ, ಎಪಿಎಂಸಿ ಆಡಳಿತಾಧಿಕಾರಿ ಆರ್. ಆದಪ್ಪ, ಕಾರ್ಯದರ್ಶಿ ಅಲ್ಲಾಭಕ್ಷ ಬಿಜಾಪುರ, ದ್ರಾಕ್ಷಿ ಬೆಳೆಗಾರರು ಹಾಗೂ ವರ್ತಕರು ಉಪಸ್ಥಿತರಿದ್ದರು.

## ಬೆಳೆ ವಿಮೆಗೆ ರೈತರಿಂದ ಅರ್ಜಿ ಆಹ್ವಾನ

**ರಾಯಚೂರು ಜುಲೈ 29:** ಪ್ರಕೃತಿ ವಿಕೋಪ, ಅತಿವೃಷ್ಟಿ, ಅನಾವೃಷ್ಟಿ, ಗಾಳಿ–ಮಳೆ ಸೇರಿದಂತೆ ವಿವಿಧ ಕಾರಣಗಳಿಂದ ಉಂಟಾಗುವ ಬೆಳೆ ನಷ್ಟದಿಂದ ರೈತರನ್ನು ಆರ್ಥಿಕವಾಗಿ ರಕ್ಷಿಸುವ ಉದ್ದೇಶದಿಂದ 2026–27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ಸರ್ಕಾರ ಹಾಗೂ ಭಾರತ ಸರ್ಕಾರದ ಸಹಭಾಗಿತ್ವದಲ್ಲಿ ಜಾರಿಯಲ್ಲಿರುವ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆಯಡಿ ಅರ್ಹ ರೈತರು ನೋಂದಣಿಯಾಗಬೇಕೆಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಕೋರಿದ್ದಾರೆ.

ಮುಂಗಾರು ಹಂಗಾಮಿನಲ್ಲಿ ಭತ್ತ (ಮಳೆ ಆಶ್ರಿತ) 612 ರೂ. ಪ್ರತಿ ಎಕರೆಗೆ, ಸಜ್ಜೆ ಮಳೆ (ನೀರಾವರಿ) 350 ರೂ.ಪ್ರತಿ ಎಕರೆಗೆ, ಸಜ್ಜೆ (ಮಳೆ ಆಶ್ರಿತ) 282 ರೂ.ಪ್ರತಿ ಎಕರೆಗೆ, ತೊಗರಿ (ಮಳೆ ಆಶ್ರಿತ) 466 ರೂ. ಪ್ರತಿ ಎಕರೆಗೆ, ತೊಗರಿ (ನೀರಾವರಿ) 488 ರೂ. ಪ್ರತಿ ಎಕರೆಗೆ, ಸೂರ್ಯಕಾಂತಿ (ಮಳೆ ಆಶ್ರಿತ) 390 ರೂ. ಪ್ರತಿ ಎಕರೆಗೆ, ನೆಲಗಡಲೆ (ಶೇಂಗಾ) (ನೀರಾವರಿ) 630 ರೂ. ಪ್ರತಿ ಎಕರೆಗೆ, ನೆಲಗಡಲೆ (ಶೇಂಗಾ) (ಮಳೆ ಆಶ್ರಿತ) 529 ರೂ. ಪ್ರತಿ ಎಕರೆಗೆ, ಹತ್ತಿ (ನೀರಾವರಿ) 1748 ರೂ. ಪ್ರತಿ ಎಕರೆಗೆ, ಹತ್ತಿ (ಮಳೆ ಆಶ್ರಿತ) 1208 ರೂ. ಪ್ರತಿ ಎಕರೆಗೆ ನಿಗದಿ ಮಾಡಲಾಗಿದ್ದು, ಆಸಕ್ತ ರೈತರು ಜುಲೈ 31ರೊಳಗಾಗಿ ನೋಂದಣಿಯಾಗಬೇಕು.

ಭತ್ತ (ನೀರಾವರಿ) 879 ರೂ. ಪ್ರತಿ ಎಕರೆಗೆ, ಸೂರ್ಯಕಾಂತಿ (ನೀರಾವರಿ) 469 ರೂ. ಪ್ರತಿ ಎಕರೆಗೆ, ಮುಸುಕಿನ ಜೋಳ (ನೀರಾವರಿ) 617 ರೂ. ಪ್ರತಿ ಎಕರೆಗೆ, ಈರುಳ್ಳಿ (ನೀರಾವರಿ) 1900 ರೂ.ಪ್ರತಿ ಎಕರೆಗೆ ನಿಗದಿ ಮಾಡಲಾಗಿದ್ದು, ಆಸಕ್ತ ರೈತರು ಆಗಸ್ಟ್ 14ರೊಳಗಾಗಿ ಪಹಣಿಯ ಪ್ರತಿ, ಬ್ಯಾಂಕ್ ಪಾಸ್ ಬುಕ್ ಪ್ರತಿ ಹಾಗೂ ಆಧಾರ್ ಪ್ರತಿ ಮತ್ತು ಕಡ್ಡಾಯವಾಗಿ ಎಫ್.ಐ.ಡಿ ವಿವರಗಳೊಂದಿಗೆ ಮೇಲಿನ ನಿಗಧಿತ ದಿನಾಂಕದೊಳಗಾಗಿ ಹತ್ತಿರದ ಗ್ರಾಮ ಓನ್, ಕರ್ನಾಟಕ ಓನ್, ಸಿಎಸ್‌ಸಿ ಸೆಂಟರ್ಸ್ ಮತ್ತು ಬ್ಯಾಂಕ್ ಶಾಖೆಗಳಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ರಾಯಚೂರು ಜಿಲ್ಲೆಗೆ ಎಸ್.ಬಿ.ಐ ಜೆನೆರಲ್ ಇನ್ಸೂರೆನ್ಸ್ ಸಂಸ್ಥೆಯು ಈ ಯೋಜನೆಯನ್ನು ಅನುಷ್ಠಾನಗೊಳಿಸುತ್ತದೆ.

ಹೆಚ್ಚಿನ ಮಾಹಿತಿಗಾಗಿ ನಿಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರ, ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಹಾಗೂ ಜಂಟಿ ಕೃಷಿ ನಿರ್ದೇಶಕರು ಕಚೇರಿಯನ್ನು ಕಚೇರಿಯ ವೇಳೆಯಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಪ್ರೀಂ ಕಲಾಪ: ನೇರ ಪ್ರಸಾರ ಬಂದ್



**ನವದೆಹಲಿ, ಜು. 29:** ಸುಪ್ರೀಂ ಕೋರ್ಟ್‌ನಲ್ಲಿ ವಕೀಲರು ಹೊಸ ಹಾಗೂ ತುರ್ತು ಪ್ರಕರಣಗಳ ವಿಚಾರಣೆಗೆ ಮನವಿ ಮಾಡುವ ವೇಳೆಯ ಲೈವ್ ವೀಡಿಯೊ ಕಾನ್ಫರೆನ್ಸಿಂಗ್ ಆಡಿಯೋವನ್ನು ಬಂದ್ (ಮ್ಯೂಟ್) ಮಾಡುವಂತೆ ಸುಪ್ರೀಂ ಕೋರ್ಟ್ ಇಂದು ಆದೇಶಿಸಿದೆ.

ಈ ನಿರ್ಧಾರದಿಂದಾಗಿ ತುರ್ತು ಪಟ್ಟಿ ಸಲ್ಲಿಕೆಯ ವಿನಂತಿಗಳು ಮತ್ತು ನ್ಯಾಯಪೀಠದ ಮೌಖಿಕ ಪ್ರತಿಕ್ರಿಯೆಗಳನ್ನು ಸಾರ್ವಜನಿಕರು ಹಾಗೂ ಮಾಧ್ಯಮಗಳು ಕೇಳದಂತೆ ತಡೆಯಲಾಗಿದೆ.

ಭಾರತದ ಮುಖ್ಯ ನ್ಯಾಯಮೂರ್ತಿಗಳ ಮುಂದೆ ತುರ್ತು ವಿಷಯಗಳನ್ನು ಪ್ರಸ್ತಾಪಿಸುವುದು "ಆಡಳಿತಾತ್ಮಕ ಪ್ರಕ್ರಿಯೆ"ಯಾಗಿದೆಯೇ ಹೊರತು, ಪೂರ್ಣ ಪ್ರಮಾಣದ ನ್ಯಾಯಾಂಗ ಕಲಾಪವಲ್ಲ. ಹೀಗಾಗಿ ಇದನ್ನು ವರದಿ ಮಾಡುವ ಅಗತ್ಯವಿಲ್ಲ ಎಂದು ಭಾರತದ ಮುಖ್ಯ ನ್ಯಾಯಮೂರ್ತಿಗಳು ಇತ್ತೀಚೆಗೆ ತಿಳಿಸಿದ್ದರು. ಆ ಹೇಳಿಕೆಯನ್ನು ಇದೀಗ ಕಾರ್ಯರೂಪಕ್ಕೆ ತರಲಾಗಿದ್ದು, ವರ್ಚುವಲ್ ವೇದಿಕೆಯಲ್ಲಿ ಹೊಸ ಪ್ರಕರಣಗಳ ಪ್ರಸ್ತಾಪದ ಧ್ವನಿಯನ್ನು ಮ್ಯೂಟ್ ಮಾಡಲಾಗುತ್ತಿದೆ.

ಏನಿದು 'ಮೆನ್ಷನಿಂಗ್' ಪ್ರಕ್ರಿಯೆ?

ಸಾಮಾನ್ಯವಾಗಿ ತಕ್ಷಣದ ನ್ಯಾಯಾಂಗ ಹಸ್ತಕ್ಷೇಪದ ಅಗತ್ಯವಿರುವ ಪ್ರಕರಣಗಳನ್ನು ತ್ವರಿತವಾಗಿ ವಿಚಾರಣೆ ಪಟ್ಟಿಗೆ ಸೇರಿಸಲು ವಕೀಲರಿಗೆ ಈ 'ಮೆನ್ಷನಿಂಗ್' ಪ್ರಕ್ರಿಯೆ ಅವಕಾಶ ನೀಡುತ್ತದೆ. ವರ್ಷಗಳಿಂದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳು (ಪಿಐಎಲ್), ರಾಜಕೀಯವಾಗಿ ಸೂಕ್ಷ್ಮವಾದ ವಿಷಯಗಳು ಹಾಗೂ ಸಂವಿಧಾನಾತ್ಮಕ ಪ್ರಾಮುಖ್ಯತೆ ಹೊಂದಿರುವ ಪ್ರಕರಣಗಳನ್ನು ಈ ವೇಳೆಯಲ್ಲೇ ಮುಖ್ಯ ನ್ಯಾಯಮೂರ್ತಿಗಳ ಗಮನಕ್ಕೆ ತರಲಾಗುತ್ತದೆ. ಈ ಸಂದರ್ಭದಲ್ಲಿ ಸಿಜೆಐ ಅವರು ವಿಷಯದ ತುರ್ತು ಅಗತ್ಯವನ್ನು ಪರಿಶೀಲಿಸಿ, ದಿನಾಂಕ ನಿಗದಿಪಡಿಸುತ್ತಾರೆ ಅಥವಾ ಮನವಿಯನ್ನು ತಿರಸ್ಕರಿಸುತ್ತಾರೆ.

ಆಡಿಯೋ ಬಂದ್‌ಗೆ ಕಾರಣವೇನು?

ಇತ್ತೀಚಿನ ದಿನಗಳಲ್ಲಿ ಹಲವು ಪ್ರಮುಖ ಅರ್ಜಿಗಳ ಮೆನ್ಷನಿಂಗ್ ವೇಳೆ ಕೋರ್ಟ್ ವ್ಯಕ್ತಪಡಿಸುತ್ತಿದ್ದ ಮೌಖಿಕ ಅಭಿಪ್ರಾಯಗಳು ಮತ್ತು ವಾದ–ವಿವಾದಗಳು ಮಾಧ್ಯಮಗಳಲ್ಲಿ ವ್ಯಾಪಕವಾಗಿ ಸುದ್ದಿಯಾಗುತ್ತಿದ್ದವು. ಅರ್ಜಿಗಳು ಅಧಿಕೃತವಾಗಿ ವಿಚಾರಣೆಗೆ ಬರುವ ಮೊದಲೇ ಈ ಚರ್ಚೆಗಳು ಸಾರ್ವಜನಿಕವಾಗಿ ತೀವ್ರ ಕುತೂಹಲ ಹಾಗೂ ಚರ್ಚೆಗೆ ಗ್ರಾಸವಾಗುತ್ತಿದ್ದವು.

ಇದೀಗ ಆಡಿಯೋ ಪ್ರಸಾರವನ್ನು ಸ್ಥಗಿತಗೊಳಿಸಿರುವುದರಿಂದ, ವೀಡಿಯೊ ಪ್ರಸಾರ ಮುಂದುವರಿದರೂ ಸಂಭಾಷಣೆಗಳು ಹೊರಗೆ ಕೇಳಿಸುವುದಿಲ್ಲ. ಈ ಕ್ರಮವು ಸುಪ್ರೀಂ ಕೋರ್ಟ್‌ನ ಆಡಳಿತಾತ್ಮಕ ವಿಚಾರಣೆಗಳು ಹಾಗೂ ಮುಖ್ಯ ನ್ಯಾಯಾಂಗ ಕಲಾಪಗಳ ನಡುವೆ ಸ್ಪಷ್ಟ ವ್ಯತ್ಯಾಸವನ್ನು ಕಾಯ್ದುಕೊಳ್ಳಲು ನೆರವಾಗಲಿದೆ.

## ಕೋರ್ಟ್ ಆದೇಶ ಪಾಲಿಸದ ನಗರಸಭೆ; ಜಪ್ತಿಗೆ ಲಾರಿಯೊಂದಿಗೆ ಬಂದ ನ್ಯಾಯಾಲಯದ ಸಿಬ್ಬಂದಿ



**ಯಾದಗಿರಿ:** ಜಿಲ್ಲಾ ನ್ಯಾಯಾಲಯದ ಆದೇಶದಂತೆ ಪರಿಹಾರ ಮೊತ್ತ ಪಾವತಿಸದ ಹಿನ್ನೆಲೆಯಲ್ಲಿ ನಗರಸಭೆಯ ಬೆಲೆಬಾಳುವ ಸಾಮಾನುಗಳನ್ನು ಜಪ್ತಿ ಮಾಡಲು ಜಿಲ್ಲಾ ನ್ಯಾಯಾಲಯದ ಸಿಬ್ಬಂದಿ ಸೋಮವಾರ ನಗರಸಭೆ ಕಚೇರಿಗೆ ಲಾರಿಯೊಂದಿಗೆ ಆಗಮಿಸಿದ ಘಟನೆ ನಡೆಯಿತು. ಈ ವೇಳೆ ನ್ಯಾಯಾಲಯದ ಸಿಬ್ಬಂದಿ, ಪರಿಹಾರ ಪಡೆಯಬೇಕಾದವರ ವಾರಸುದಾರರು ಹಾಗೂ ನಗರಸಭೆ ಅಧಿಕಾರಿಗಳ ನಡುವೆ ಸುಮಾರು ಮೂರು ತಾಸುಗಳ ಕಾಲ ಮಾತಿನ ಚಕಮಕಿ ಹಾಗೂ ಹೈಡ್ರಾಮಾ ನಡೆಯಿತು.

ಸಾಮಾನುಗಳ ಜಪ್ತಿಗೆ ನ್ಯಾಯಾಲಯದ ಸಿಬ್ಬಂದಿ ಮುಂದಾಗುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಪೌರಾಯುಕ್ತ ಉಮೇಶ ಚವ್ಹಾಣ ಅವರು ಐದಾರು ಸುತ್ತಿನ ಮಾತುಕತೆ ನಡೆಸಿದರು. ಬಳಿಕ ಜಿಲ್ಲಾಧಿಕಾರಿಯನ್ನು ಮಂಗಳವಾರ ಭೇಟಿ ಮಾಡಿ ಸಮಸ್ಯೆ ಇತ್ಯರ್ಥಪಡಿಸುವುದಾಗಿ ಹಾಗೂ ನ್ಯಾಯಾಲಯದ ಆದೇಶದಂತೆ ಹಂತ ಹಂತವಾಗಿ ಪರಿಹಾರ ಮೊತ್ತ ಪಾವತಿಸಲಾಗುವುದು ಎಂದು ಭರವಸೆ ನೀಡಿದ ನಂತರ ಪರಿಸ್ಥಿತಿ ಶಾಂತಗೊಂಡಿತು.

50 ವರ್ಷದ ಹಳೆಯ ವಿವಾದ: ಸುಮಾರು ಐದು ದಶಕಗಳ ಹಿಂದೆ ಸರಸ್ವತಿ ನಾರಾಯಣ ಘಾಪಸೆ ಅವರಿಗೆ ಸೇರಿದ್ದ ನಗರದ ಸುಮಾರು ಅರ್ಧ ಎಕರೆ ಜಾಗವನ್ನು ಅಂದಿನ ಸ್ಥಳೀಯ ಸಂಸ್ಥೆ ಸಾರ್ವಜನಿಕರಿಗೆ ನಿವೇಶನವಾಗಿ ಹಂಚಿಕೆ ಮಾಡಿತ್ತು. ಜಾಗದಲ್ಲಿ ಮನೆ ನಿರ್ಮಾಣ ಆರಂಭವಾದ ಬಳಿಕ ವಿಷಯ ತಿಳಿದ ಭೂಮಿಯ ಮಾಲೀಕರು ಅಧಿಕಾರಿಗಳನ್ನು ಸಂಪರ್ಕಿಸಿದರೂ ನ್ಯಾಯ ದೊರೆಯದ ಹಿನ್ನೆಲೆಯಲ್ಲಿ ನ್ಯಾಯಾಲಯದ ಮೊರೆ ಹೋದರು.

ತಾಲೂಕು ನ್ಯಾಯಾಲಯದಿಂದ ಆರಂಭಗೊಂಡ ಪ್ರಕರಣ ಜಿಲ್ಲಾ ನ್ಯಾಯಾಲಯ ಹಾಗೂ ಹೈಕೋರ್ಟ್‌ವರೆಗೂ ಸಾಗಿದ್ದು, ಅಂತಿಮವಾಗಿ ಭೂ ಮಾಲೀಕರ ಪರವಾಗಿ ತೀರ್ಪು ಬಂದಿದೆ. ಈ ಹಿನ್ನೆಲೆಯಲ್ಲಿ ಸರಸ್ವತಿ ನಾರಾಯಣ ಘಾಪಸೆ ಅವರ ವಾರಸುದಾರರಿಗೆ 2.12 ಕೋಟಿ ಪರಿಹಾರ ಪಾವತಿಸುವಂತೆ ಜಿಲ್ಲಾ ನ್ಯಾಯಾಲಯ ಆದೇಶ ನೀಡಿದೆ.

ನ್ಯಾಯಾಲಯದ ಆದೇಶದ ಹೊರತಾಗಿಯೂ ಪರಿಹಾರ ಮೊತ್ತ ಪಾವತಿಯಾಗದ ಕಾರಣ ಸೋಮವಾರ ನ್ಯಾಯಾಲಯದ ಸಿಬ್ಬಂದಿ ಹಾಗೂ ವಾರಸುದಾರರು ಲಾರಿಯೊಂದಿಗೆ ನಗರಸಭೆಗೆ ಆಗಮಿಸಿ ಸಾಮಾನುಗಳ ಜಪ್ತಿಗೆ ಮುಂದಾದರು. ಈ ವೇಳೆ ಪೌರಾಯುಕ್ತ ಉಮೇಶ ಚವ್ಹಾಣ ಮಧ್ಯಪ್ರವೇಶಿಸಿ ಜಿಲ್ಲಾಧಿಕಾರಿಯೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದರು.

ಅಲ್ಲದೆ, ಮೊದಲ ಹಂತವಾಗಿ 5 ಲಕ್ಷದ ಚೆಕ್ ನೀಡಲು ಕ್ರಮ ಕೈಗೊಳ್ಳಲಾಗಿದ್ದು, ಈಗಾಗಲೇ 20 ಲಕ್ಷ ಪರಿಹಾರ ಮೊತ್ತವನ್ನು ಪಾವತಿಸಲಾಗಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ. ಈ ಭರವಸೆಯ ಬಳಿಕ ಸುಮಾರು ಮೂರು ತಾಸುಗಳ ಕಾಲ ಮುಂದುವರಿದ ಗೊಂದಲ ಅಂತ್ಯಗೊಂಡಿತು.

# ರೋಟರಿ ಕ್ಲಬ್ ಬೀದರ್ ನೂತನ ಪದಾಧಿಕಾರಿಗಳ ಪದಗ್ರಹಣ: ಸಮಾಜಮುಖಿ ಸೇವೆಗೆ ಆದ್ಯತೆ



**ಬೀದರ್:** ರೋಟರಿ ಅಂತರರಾಷ್ಟ್ರೀಯ ಸಂಸ್ಥೆಯ 2026–27ನೇ ಸಾಲಿನ ರೋಟರಿ ಕ್ಲಬ್ ಬೀದರ್‌ನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ನಗರದ ಸಾಯಿ ಸಮರ್ಥ ಕಲ್ಯಾಣಮಂಟಪದಲ್ಲಿ ನಡೆಯಿತು.

ರೋಟರಿ ಜಿಲ್ಲಾ 3160ರ ಜಿಲ್ಲಾ ಗವರ್ನರ್ ರಾ. ಪಿ. ಕೇಶವ ರೆಡ್ಡಿ ಅವರು ರಾ. ಅನಿಲಕುಮಾರ ಬಿರಾದಾರ್ ಅವರನ್ನು ನೂತನ ಅಧ್ಯಕ್ಷರಾಗಿ ಹಾಗೂ ರಾ. ಸಂಗಮೇಶ್ ಮಾಮಶೆಟ್ಟಿ ಅವರನ್ನು ಕಾರ್ಯದರ್ಶಿಯಾಗಿ ಅಧಿಕೃತವಾಗಿ ಪದಗ್ರಹಣ ಮಾಡಿಸಿದರು.

ಸಮಾರಂಭದಲ್ಲಿ ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಶೈಲೇಂದ್ರ ಬೆಲ್ದಾಳೆ, ಡಿಸ್ಟ್ರಿಕ್ಟ್ ಗವರ್ನರ್ ಎಲೆಕ್ಟ್ ರಾ. ತ್ರಿವಿಕ್ರಮ ಜೋಶಿ, ಸಹಾಯಕ ಗವರ್ನರ್ ರಾ. ನಿತಿನ್ ಕರ್ಪೂರ್, ರಾ. ರವೀಂದ್ರನಾಥ ಮುಲಗೆ, ರಾ. ಇರ್. ಹವಶೆಟ್ಟಿ ಪಾಟೀಲ, ರಾ. ಬಸವರಾಜ ಧನ್ನುರ್, ರಾ. ರಘು ಕೃಷ್ಣಮೂರ್ತಿ, ರಾ. ಸೂರ್ಯಕಾಂತ್ ರಾಮಶೆಟ್ಟಿ, ರಾ. ಶಿವಕುಮಾರ ಯಲಾಳ ಸೇರಿದಂತೆ ಜಿಲ್ಲಾ ಪದಾಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು. ಮಾಜಿ ಅಧ್ಯಕ್ಷ ರಾ. ಸೋಮಶೇಖರ ಪಾಟೀಲ ಅವರು ನೂತನ ಸದಸ್ಯರನ್ನು ಕ್ಲಬ್‌ಗೆ ಸೇರ್ಪಡೆಗೊಳಿಸಿದರು.

ನೂತನ ಪದಾಧಿಕಾರಿಗಳು ಅಧಿಕಾರ ಸ್ವೀಕರಿಸುವ ಮುನ್ನವೇ ಎರಡು ಪ್ರಮುಖ ಸಮಾಜಮುಖಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಿರುವುದು ವಿಶೇಷವಾಗಿತ್ತು. ಐಎಂಎ ಸಭಾಂಗಣದಲ್ಲಿ ನಡೆದ ಮೆಗಾ ರಕ್ತದಾನ ಶಿಬಿರದಲ್ಲಿ 25 ಮಂದಿ ಸ್ವಯಂಪ್ರೇರಿತ ರಕ್ತದಾನಿಗಳು ಪಾಲ್ಗೊಂಡು ಮಾನವೀಯ ಸೇವೆಗೆ ಕೈಜೋಡಿಸಿದರು.

ಇದಲ್ಲದೆ ವೈದ್ಯರ ದಿನಾಚರಣೆ ಹಾಗೂ ಚಾರ್ಟರ್ಡ್ ಅಕೌಂಟೆಂಟ್ಸ್ ದಿನಾಚರಣೆಯನ್ನು ಸಂಯುಕ್ತವಾಗಿ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಹೈದರಾಬಾದ್‌ನ ಕ್ಯಾನ್ಸರ್ ತಜ್ಞ ಡಾ. ಹರೀಶ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಬ್ರಿಮ್ಸ್ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಅಹ್ಮೆದ್ದೀನ್, ಸಿಎ ರಾ. ಕಮಲ್ ಕಿಶೋರ್ ಅತ್ತಲ್, ಸಿಎ ಬಿ.ಜಿ. ಸೇಠ್ಕರ್ ಸೇರಿದಂತೆ ಅನೇಕ ಹಿರಿಯ ವೈದ್ಯರು ಹಾಗೂ ಗಣ್ಯರು ಪಾಲ್ಗೊಂಡಿದ್ದರು.

ಈ ಎರಡೂ ಕಾರ್ಯಕ್ರಮಗಳ ಯಶಸ್ಸು ರೋಟರಿ ಕ್ಲಬ್ ಬೀದರ್‌ನ ಹೊಸ ತಂಡದ ಸೇವಾ ಮನೋಭಾವಕ್ಕೆ ಸಾಕ್ಷಿಯಾಗಿದೆ ಎಂದು ಜಿಲ್ಲಾ ಗವರ್ನರ್ ಹಾಗೂ ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಪದಗ್ರಹಣ ಸಮಾರಂಭದ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ನೂತನ ಅಧ್ಯಕ್ಷ ರಾ. ಅನಿಲಕುಮಾರ ಬಿರಾದಾರ್ ಹಾಗೂ ಕಾರ್ಯದರ್ಶಿ ರಾ. ಸಂಗಮೇಶ್ ಮಾಮಶೆಟ್ಟಿ, ಆರೋಗ್ಯ, ಶಿಕ್ಷಣ, ಯುವಜನ ಅಭಿವೃದ್ಧಿ, ಪರಿಸರ ಸಂರಕ್ಷಣೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವರ್ಷಪೂರ್ತಿ ಜನಪರ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದಾಗಿ ತಿಳಿಸಿದರು. ರೋಟರಿ ಸದಸ್ಯರು, ನಿರ್ದೇಶಕರ ಮಂಡಳಿ, ದಾನಿಗಳು ಹಾಗೂ ಸಾರ್ವಜನಿಕರ ಸಹಕಾರದೊಂದಿಗೆ ಸಮಾಜದಲ್ಲಿ ಶಾಶ್ವತ ಪರಿಣಾಮ ಬೀರುವ ಸೇವಾ ಕಾರ್ಯಗಳನ್ನು ಕೈಗೊಳ್ಳುವುದು ತಮ್ಮ ಗುರಿಯಾಗಿದೆ ಎಂದು ಅವರು ಹೇಳಿದರು.

ಸ್ನೇಹಭೋಜನ ಹಾಗೂ ಪರಸ್ಪರ ಶುಭಾಶಯ ವಿನಿಮಯದೊಂದಿಗೆ ಕಾರ್ಯಕ್ರಮ ಯಶಸ್ವಿಯಾಗಿ ಮುಕ್ತಾಯಗೊಂಡಿತು.

# ಜಾಗೃತಿ ಮೂಡಿಸುವ ಕಾರ್ಯಕ್ರಮ



**ಗದಗ,ಜು.29:** ಗದಗ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಹಾಗೂ ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರ, ಗದಗ ಇವರ ಸಹಯೋಗದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ–2026 ( ಎಸ್‌ಐಆರ್ ) ರ ಅಂಗವಾಗಿ ಎಸ್‌ಐಆರ್ –2026 ಬಗ್ಗೆ ಜಾಗೃತಿ/ಅರಿವು ಮೂಡಿಸುವ ಕಾರ್ಯಕ್ರಮವನ್ನು ಮಂಗಳವಾರ ಗದಗ ನರಸಾಪುರ ಕೈಗಾರಿಕೆ ವಸಾಹತು ಆವರಣದಲ್ಲಿ ಹಮ್ಮಿಕೊಳ್ಳಲಾಯತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಾಯಕ ಕಾನೂನು ಅಭಿರಕ್ಷಕರಾದ ಗುರುರಾಜ ಬಿ. ಗೌರಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಪ್ರಜಾಪ್ರಭುತ್ವದ ಸದೃಢತೆಗೆ ನಿಖರ ಮತದಾರರ ಪಟ್ಟಿ ಅತ್ಯಂತ ಅವಶ್ಯವಾಗಿದ್ದು ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆಗೊಂಡಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ಹೊಸದಾಗಿ ಸಿದ್ಧಪಡಿಸುವ ಪ್ರಕ್ರಿಯೆ ನಡೆಯುತ್ತಿದೆ. ಈ ಹಿಂದೆ ಇದ್ದ ಮತದಾರರು ಸದ್ಯ ಅದೇ ಸ್ಥಳದಲ್ಲಿದ್ದಾರೆಯೇ ಹೊಸದಾಗಿ ಯಾರೆಲ್ಲ ಸೇರ್ಪಡೆಯಾಗಬೇಕು ಎಂಬುದನ್ನು ಗುರುತಿಸಿ ದೃಢೀಕರಿಸುವ ಸಲುವಾಗಿ ಈ ವರ್ಷ ಎಸ್‌ಐಆರ್ 2026 ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ. ಬಿ.ಎಲ್.ಓಗಳು ಮನೆ ಮನೆಗೆ ಭೇಟಿ ನೀಡಿದಾಗ ಸೂಕ್ತ ಫಾರಂ ಭರ್ತಿ ಮಾಡಿ ನೀಡಿ ಪ್ರಕ್ರಿಯೆ ಯಶಸ್ವಿಗೊಳಿಸಬೇಕು ಎಂದು ಗುರುರಾಜ ಬಿ ಗೌರಿ ಅವರು ಸಾರ್ವಜನಿಕರಿಗೆ ಕಾನೂನು ನೆರವು ಹಾಗೂ ಪ್ರಸ್ತುತ ಕಾನೂನಿನ ಬಗ್ಗೆ ಸಂಕ್ಷಿಪ್ತವಾಗಿ ಮಾಹಿತಿ ನೀಡಿದರು. ಹಾಗೂ ಎಸ್‌ಐಆರ್ ಬಗ್ಗೆ ಮಾತನಾಡಿದರು.

ಜಿ.ಪಂ. ಉಪಕಾರ್ಯದರ್ಶಿ ಸಿ. ಆರ್. ಮುಂಡರಗಿ ಇವರು ಮಾತನಾಡಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ–2026 ಅಂಗವಾಗಿ ಎಸ್‌ಐಆರ್ –2026ರ ಪ್ರಕ್ರಿಯೆ ಬಗ್ಗೆ ಊಹಾಪೋಹಗಳಿಗೆ ಕಿವಿ ಕೊಡದೇ ಎಸ್‌ಐಆರ್ ಬಗ್ಗೆ ಚುನಾವಣಾ ಆಯೋಗದಿಂದ ಹೊರಡಿಸಲಾದ ವೇಳಾಪಟ್ಟಿಯಂತೆ ಎಲ್ಲರೂ ಸಂಬಂಧಿಸಿದ ಬಿಎಲ್‌ಓ ಗಳಿಗೆ ಸಮರ್ಪಕವಾದ ಮಾಹಿತಿಯನ್ನು ನೀಡಬೇಕು. ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಅತ್ಯಂತ ಪಾರದರ್ಶಕವಾದ ಮತ್ತು ನಿಖರವಾದ ಹೊಸ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಈ ವಿಶೇಷ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ತಿಳಿಸಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರ, ಪ್ರಾಶುಂಪಾಲರಾದ ಡಾ. ಶಿವಪ್ಪ ಮರಿಬಸಪ್ಪ ಕುರಿ ಇವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ–2026 ( ಎಸ್ ಐ ಆರ್ )2026ರ ಬಗ್ಗೆ ಅರಿವು ಮೂಡಿಸಿದರು.


ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಹಾಯಕ ಪ್ರಾಧ್ಯಾಪಕ ಡಾ. ಪಿ. ಎಚ್. ಕ್ಯಾರಕೊಪ್ಪ, ಸಹಾಯಕ ಪ್ರಾಧ್ಯಾಪಕರು, ಸ್ವಾಗತಿಸಿದರು. ಐ.ಕ್ಯೂ.ಎ.ಸಿ. ಸಂಚಾಲಕರಾದ ಖಲೀಲ ಅಹ್ಮದ್ ಚಿಕ್ಕೇರೂರ, ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸಹಾಯಕ ಪ್ರಾಧ್ಯಾಪಕರಾದ ಮಲಪ್ಪ ಹೊಸೂರು, ಕಾರ್ಯಕ್ರಮ ನಿರೂಪಣೆ ಮಾಡಿದರು. ಸಹಾಯಕ ಪ್ರಾಧ್ಯಾಪಕರಾದ ಡಾ. ಮಹಾದೇವ ವಡೇಕಾರ ವಂದಿಸಿದರು.

## ಕುಸಿಯುತ್ತಿರುವ ಸೇತುವೆ ಎಚ್ಚತ್ತಕೊಳ್ಳದಿದ್ದರೆ ಆಪಾಯ ಕಟ್ಟಿಟ್ಟಬುತ್ತಿ

**ಬಂಗಾರಪೇಟೆ: ಜು,29**–ಪಟ್ಟಣದ ಕುಪ್ಪಸ್ವಾಮಿ ಮೂದಲಿಯಾರ್ ಬಡಾವಣೆಯ ಗಾಯತ್ರಿ ದೇವಾಸ್ಥಾನದ ಮುಂಭಾಗ ಇರುವಂತ ಸೇತುವೆ ಕುಸಿಯುತ್ತಿದೆ.ಈ ರಸ್ತೆಯ ಮಾರ್ಗವಾಗಿ ಶಾಲೆಯ ಬಸ್‌ಗಳು, ಕಟ್ಟಡ ನಿರ್ಮಾಣದ ಸಮಗ್ರಿಗಳನ್ನ ಹೊತ್ತು ಬರುವ ಲೋಡ್ ಲಾರಿಗಳು ಈ ರಸ್ತೆಯ ಮುಖಂತರವೇ ಬಡಾವಣೆಯ ನಾನಾ ಭಾಗಗಳಿಗೆ ಸಾಗಲು ಇರುವಂತ ರಸ್ತೆ.

ಸೇತುವೆಯ ಕೆಳಗೆ ರಾಜಕಾಲುವೆಯ ಕೊಳಚೆ ನೀರು ಹರಿಯುವುದರಿಂದ ಕಾಲುವೆ ಎರಡು ಬದಿಗಳಲ್ಲಿ ಕಲ್ಲಿನ ತಡೆಗೋಡೆ ನಿರ್ಮಾಣ ಮಾಡದೆ ದಶಕಗಳಿಂದ ಹಾಗೆ ಬಿಟ್ಟಿರುವುದಿರಿಂದ ಮನೆಗಳ ಹಿಂಭಾಗವೇ ಕಾಲುವೆಯ ಕೊಳಚೆ ನೀರು ಹರಿಯುತ್ತ ದಿನದಿಂದ ದಿನಕ್ಕೆ ಕಾಲುವೆ ಸುತ್ತಲತೆ ಮನೆಗಳ ಗೋಡೆಗಳಿಗೆ ತಾಕುತ್ತಿರುವುದು ಹಾಗೂ ವಿಪರೀತ ಸೊಳ್ಳೆಗಳ ಕಾಟ ಹಾಗೂ ಹಂದಿಗಳ ಓಡಾಟ ಬಡಾವಣೆಗಳಲ್ಲಿ ಹೆಚ್ಚುತ್ತಿದೆ ಈ ರಾಜಕಾಲುವೆಯಿಂದ ಒಂದೆಡೆ ಸಾರ್ವಜನಿಕರ ಆಸ್ತಿ ನಷ್ಟ ಮತ್ತೊಂದು ಕಡೆ ಆನಾರೋಗ್ಯಕ್ಕೆ ದಾರಿ ಮಾಡಿಕೊಡುತ್ತಿದೆ ಇದು ನಿಜಕ್ಕೂ ಮುಂದೆ ಸಾರ್ವಜನಿಕರಿಗೆ ಆಪಾಯಕಾರಿಯಾಗಿ ಪರಿಣಾಮಿಸಲಿದೆ.


ಸಂಬಂಧಪಟ್ಟ ಇಲಾಖೆ ಮತ್ತು ಅಧಿಕಾರಿಗಳು ಎಚ್ಚತ್ತುಕೊಂಡು ರಾಜಕಾಲುವೆ ಎರಡು ಬದಿಯಲ್ಲಿ ತಡೆಗೋಡೆ ನಿರ್ಮಾಣ ಮಾಡಿ ಸೇತುವೆಯನ್ನ ಹೊಸದಾಗಿ ನಿರ್ಮಾಣ



ಮಾಡಿದರೆ ಮುಂದೆ ಮನೆಗಳಿಗೆ ಮತ್ತು ಸಾರ್ವಜನಿಕರಿಗೆ ಆಗಬಹುದಾದ ಅನಾಹುತವನ್ನು ತಪ್ಪಿಸಿದಂತಾಗುತ್ತದೆ.

ಒಂದು ವೇಳೆ ಇತ್ತಕಡೆ ಗಮನ ಹರಿಸದಿದ್ದೆರೆ ಖಂಡಿತ ಇಂದಲ್ಲ ನಾಳೆ ಅನಾಹುತ ಸಂಭವಿಸುದರಲ್ಲಿ ಅನುಮಾನವಿಲ್ಲ ಎಂದು ಸಾರ್ವಜನಿಕರು ದೂರುತ್ತಿದ್ದಾರೆ.

# ಆಕ್ಷೇಪಾರ್ಹ ಪೋಸ್ಟ್ ಎಕ್ಸ್‌ಗೆ ನೋಟಿಸ್



**ನವದೆಹಲಿ;ಜು.29:** ಕಾಕ್ರೋಚ್ ಪಾರ್ಟಿ ಸಿಜೆಪಿ ಪ್ರತಿಭಟನೆಯ ವೇಳೆಯಲ್ಲಿ ದೇಶದ ಸಂವಿಧಾನಾತ್ಮಕ ಹುದ್ದೆಗಳಲ್ಲಿರುವ ಪ್ರಮುಖರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ನಿಂದನಾತ್ಮಕ ಹಾಗೂ ಆಕ್ಷೇಪಾರ್ಹ ಪೋಸ್ಟ್‌ಗಳನ್ನು ಹಂಚಿಕೊಳ್ಳಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರು ಪ್ರಮುಖ ಸಾಮಾಜಿಕ ಮಾಧ್ಯಮ ಎಕ್ಸ್ (ಹಿಂದಿನ ಟ್ವಿಟರ್) ಸಂಸ್ಥೆಗೆ ಖಡಕ್ ನೋಟಿಸ್ ನೀಡಿದ್ದಾರೆ.
ಸಂವಿಧಾನಾತ್ಮಕ ಮುಖ್ಯಸ್ಥರನ್ನು ಗುರಿಯಾಗಿಸಿಕೊಂಡು ಹರಡಲಾಗುತ್ತಿರುವ ದ್ವೇಷಪೂರಿತ ಹಾಗೂ ಮಾನಹಾನಿಕರ ವಿಷಯಗಳನ್ನು ತಕ್ಷಣವೇ ವೇದಿಕೆಯಿಂದ ತೆಗೆದುಹಾಕಬೇಕು ಎಂದು ದೆಹಲಿ ಪೊಲೀಸರು ನಿರ್ದೇಶಿಸಿದ್ದಾರೆ.

ಪೋಸ್ಟ್ ಮಾಡಿದವರ ವಿವರಕ್ಕೆ ಪಟ್ಟುಸಾಮಾಜಿಕ ಜಾಲತಾಣ 'ಫಿ' ಗೆ ನೀಡಿರುವ ನೋಟಿಸ್‌ನಲ್ಲಿ ದೆಹಲಿ ಪೊಲೀಸರು ಪ್ರಮುಖ ಐದು ಬೇಡಿಕೆಗಳನ್ನು ಮುಂದಿಟ್ಟಿದ್ದಾರೆಆಕ್ಷೇಪಾರ್ಹ ವಿಡಿಯೋ ಮತ್ತು ಪೋಸ್ಟ್ ಹಾಕಿರುವ ಖಾತೆದಾರರ ಪೂರ್ಣ ಹೆಸರು, ವಿಳಾಸ, ಸಂಪರ್ಕ ಸಂಖ್ಯೆ, ಇಮೇಲ್ ಐಡಿ ಹಾಗೂ ಲಾಗಿನ್-ಲಾಗ್‌ಔಟ್ ಸಮಯದ ವಿವರಗಳನ್ನು ತಕ್ಷಣ ಒದಗಿಸಬೇಕು.
ಪ್ರಕರಣದ ಮುಂದಿನ ತನಿಖೆಯ ಹಿತದೃಷ್ಟಿಯಿಂದ ಸಂಬಂಧಿಸಿದ ಎಲ್ಲಾ ಡಿಜಿಟಲ್ ಸಾಕ್ಷ್ಯಗಳು ಮತ್ತು ಡಾಟಾಗಳನ್ನು ಸಂರಕ್ಷಿಸಿಡಬೇಕು.
ಭಾರತೀಯ ಸಾಕ್ಷ್ಯ ಅಧಿನಿಯಮ ವಿಭಾಗ 63(4) ರ ಅಡಿಯಲ್ಲಿ ಅಗತ್ಯವಿರುವ ಡಿಜಿಟಲ್ ಪ್ರಮಾಣಪತ್ರವನ್ನು ಸಲ್ಲಿಸಬೇಕು.

ಕಳೆದ ಕೆಲವು ದಿನಗಳಿಂದ ಜಂತರ್ ಮಂತರ್‌ನಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆ ಹಾಗೂ ಜುಲೈ 20 ರ 'ಸಂಸದ್ ಚಲೋ' ಮೆರವಣಿಗೆಯ ಸಮಯದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ಪ್ರಮುಖರ ವಿರುದ್ಧ ಪ್ರಚೋದನಕಾರಿ ಮತ್ತು ಅಸಭ್ಯ ಭಾಷೆಯ ಪೋಸ್ಟ್‌ಗಳನ್ನು ಹಂಚಿಕೊಳ್ಳಲಾಗಿತ್ತು. ದೆಹಲಿ ಪೊಲೀಸರ ವಿಶೇಷ ಸೋಷಿಯಲ್ ಮೀಡಿಯಾ ಮಾನಿಟರಿಂಗ್ ತಂಡವು ಜಾಲತಾಣಗಳ ಮೇಲೆ ಸತತ ನಿಗಾ ವಹಿಸಿದ್ದು, ಕಂಟೆಂಟ್ ಗುರುತಿಸಿದ ತಕ್ಷಣವೇ ಆಯಾ ಪ್ಲಾಟ್‌ಫಾರ್ಮ್‌ಗಳಿಗೆ ನೋಟಿಸ್ ನೀಡಿ ಡಿಲೀಟ್ ಮಾಡಿಸುತ್ತಿದೆ. ಹಲವು ವಿಡಿಯೋ ಹಾಗೂ ನಿಂದನಾತ್ಮಕ ಕಾಮೆಂಟ್‌ಗಳನ್ನು ತೆಗೆದುಹಾಕಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಖಾತೆದಾರರ ಸಂಪೂರ್ಣ ವಿವರಕ್ಕೆ ಪಟ್ಟು: ದೆಹಲಿ ಪೊಲೀಸರು ಸಲ್ಲಿಸಿರುವ ಮನವಿಯಲ್ಲಿ, ವಿವಾದಾತ್ಮಕ ವಿಷಯಗಳನ್ನು ಅಪ್‌ಲೋಡ್ ಮಾಡಿದ ಬಳಕೆದಾರರ ಪೂರ್ಣ ಹೆಸರು, ವಾಸಸ್ಥಳದ ವಿಳಾಸ, ಸಂಪರ್ಕ ಸಂಖ್ಯೆ, ಇಮೇಲ್ ವಿಳಾಸ ಹಾಗೂ ಅವರು ಖಾತೆಗೆ ಲಾಗಿನ್ ಮತ್ತು ಲಾಗ್ ಔಟ್ ಆಗಿರುವ ಸಮಯದ ವಿವರಗಳನ್ನು ನೀಡುವಂತೆ ಕೋರಿದ್ದಾರೆ. ಪ್ರಕರಣದ ಮುಂದಿನ ಕಾನೂನು ತನಿಖೆಯ ಹಿತದೃಷ್ಟಿಯಿಂದ ಈ ಎಲ್ಲಾ ಡಿಜಿಟಲ್ ಮಾಹಿತಿಗಳನ್ನು ಸುರಕ್ಷಿತವಾಗಿ ಕಾಯ್ದಿರಿಸಲು ಎಕ್ಸ್ ಸಂಸ್ಥೆಗೆ ತಿಳಿಸಲಾಗಿದೆ.

ಇದರ ಜೊತೆಗೆ, ಡಿಜಿಟಲ್ ಸಾಕ್ಷ್ಯಾಧಾರಗಳ ಕಾನೂನು ಮಾನ್ಯತೆಗಾಗಿ ಭಾರತೀಯ ಸಾಕ್ಷ್ಯ ಅಧಿನಿಯಮದ ಸೆಕ್ಷನ್ 63(4) ರ ಅಡಿಯಲ್ಲಿ ಅಧಿಕೃತ ಪ್ರಮಾಣಪತ್ರವನ್ನು ಒದಗಿಸುವಂತೆಯೂ ದೆಹಲಿ ಪೊಲೀಸ್ ಸೂಚಿಸಿದೆ.

ಪ್ರಧಾನಿ ಮೋದಿ ವಿರುದ್ಧದ ನಿಂದನೀಯ ಪೋಸ್ಟ್‌ಗಳ ವಿರುದ್ಧ ಕ್ರಮ ಇದಕ್ಕೂ ಮುನ್ನ, ಜುಲೈ 27 ರಂದು ದೆಹಲಿ ಪೊಲೀಸರು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ವಿರುದ್ಧ ಜಂತರ್ ಮಂತರ್‌ನಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆ ಹಾಗೂ ಜುಲೈ 20 ರ 'ಸಂಸದ್ ಚಲೋ' ಮೆರವಣಿಗೆಯ ವೇಳೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ್ದ ಅತ್ಯಂತ ಅಸಭ್ಯ ಮತ್ತು ನಿಂದನಾತ್ಮಕ ಕಾಮೆಂಟ್‌ಗಳು ಹಾಗೂ ವೀಡಿಯೊಗಳನ್ನು ತಕ್ಷಣವೇ ತೆಗೆದುಹಾಕುವಂತೆ ವಿವಿಧ ಸಾಮಾಜಿಕ ಮಾಧ್ಯಮ ಸಂಸ್ಥೆಗಳಿಗೆ ನಿರ್ದೇಶನ ನೀಡಿದ್ದರು.

ರಾಷ್ಟ್ರರಾಜಧಾನಿಯಲ್ಲಿ ನಡೆದ ಪ್ರತಿಭಟನೆ ಹಾಗೂ ತದನಂತರದ ಘಟನೆಗಳ ಸಂದರ್ಭದಲ್ಲಿ ಪ್ರಧಾನಿಯವರ ವಿರುದ್ಧ ಕೀಳುಮಟ್ಟದ ಭಾಷೆ ಬಳಸಿರುವ ಪೋಸ್ಟ್‌ಗಳು ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಡಿದ್ದವು. ಈ ಹಿನ್ನೆಲೆಯಲ್ಲಿ ದೆಹಲಿ ಪೊಲೀಸರ ವಿಶೇಷ ಸಾಮಾಜಿಕ ಜಾಲತಾಣ ನಿಗಾ ತಂಡವು ಆನ್‌ಲೈನ್‌ನಲ್ಲಿ ಸತತ ಕಾರ್ಯಾಚರಣೆ ನಡೆಸುತ್ತಿದ್ದು, ಇಂತಹ ನಿಂದನಾತ್ಮಕ ಪೋಸ್ಟ್‌ಗಳನ್ನು ಗುರುತಿಸಿ ಆಯಾ ಮಾಧ್ಯಮ ಸಂಸ್ಥೆಗಳಿಗೆ ಮಧ್ಯಂತರ ನೋಟಿಸ್‌ಗಳನ್ನು ಜಾರಿಗೊಳಿಸುತ್ತಿದೆ. ಪೊಲೀಸರ ಸೂಚನೆ ಮೇರೆಗೆ ಈಗಾಗಲೇ ಹಲವು ಅಸಭ್ಯ ವೀಡಿಯೊಗಳು ಹಾಗೂ ಕಾಮೆಂಟ್‌ಗಳನ್ನು ಜಾಲತಾಣಗಳಿಂದ ತೆರವುಗೊಳಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಪ್ರಶ್ನೆಪತ್ರಿಕೆ ಸೋರಿಕೆ ದೊಡ್ಡ ಅಪರಾಧ: ಸಂತೋಷ್ ಹೆಗ್ಡೆ

**ಕೆ.ಆರ್.ಪುರ ಜು.29–** ಪ್ರಶ್ನೆ ಪತ್ರಿಕೆ ಸೋರಿಕೆ ಮಾಡುವುದು ಕೇವಲ ನಿಯಮ ಉಲ್ಲಂಘನೆಯಲ್ಲ, ಅದು ಕಷ್ಟಪಟ್ಟು ಓದುವ ಪ್ರಾಮಾಣಿಕ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುವ ಮಹಾಪರಾಧ ಎಂದು ಮಾಜಿ ಲೋಕಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಅವರು ಗುಡುಗಿದ್ದಾರೆ.
ಮಹದೇವಪುರ ಕ್ಷೇತ್ರದ ಹೂಡಿಯಲ್ಲಿ ಭಾರತೀಯರ ಸೇವಾ ಸಮಿತಿಯ ಪ್ರಾಧನ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದರು.
ಇಂತಹ ಕೃತ್ಯಗಳು ಮುಂದೆಂದೂ ಮರುಕಳಿಸದಂತೆ ತಡೆಯಲು ಅಕ್ರಮದಲ್ಲಿ ಭಾಗಿಯಾದ ಪ್ರತಿಯೊಬ್ಬರ ವಿರುದ್ಧ ಸರ್ಕಾರ ಅತ್ಯಂತ ಕಠಿಣ ಕಾನೂನು ಕ್ರಮ ಜರುಗಿಸಬೇಕು" ಎಂದು ಒತ್ತಾಯಿಸಿದರು.
ಸಚಿವರ ರಾಜೀನಾಮೆಯಿಂದಷ್ಟೇ ಪರಿಹಾರ ಸಿಗದು!
ಪ್ರಶ್ನೆ ಪತ್ರಿಕೆ ಸೋರಿಕೆಯಾದ ತಕ್ಷಣ ಸಂಬಂಧಪಟ್ಟ ಸಚಿವರು ರಾಜೀನಾಮೆ ನೀಡುವುದು ನೈತಿಕ ಹೊಣೆಗಾರಿಕೆಯಾಗಿದರೂ, ಅದೊಂದೇ ಈ ಸಮಸ್ಯೆಗೆ ಶಾಶ್ವತ ಮುಕ್ತಿ ಸಿಗುವುದಿಲ್ಲ. ಈ ಜಾಲದ ಹಿಂದಿರುವ ಕಿಂಗ್‌ಪಿನ್‌ಗಳು, ಅಧಿಕಾರಿಗಳು ಮತ್ತು ಮಧ್ಯವರ್ತಿಗಳನ್ನು ಮೂಲಸಮೇತ ಕಿತ್ತೊಗೆಯಬೇಕು ಎಂದು ಆಗ್ರಹಿಸಿದರು.
ಸಾರ್ವಜನಿಕರಿಗೆ ತೊಂದರೆಯಾದಾಗ ಅಥವಾ ಅನಾಹುತಗಳು ಸಂಭವಿಸಿದ ಮೇಲಷ್ಟೇ ಎಚ್ಚೆತ್ತುಕೊಳ್ಳುವ ಧೋರಣೆಯನ್ನು ಬಿಟ್ಟು, ಮುನ್ನೆಚ್ಚರಿಕಾ ಕ್ರಮವಾಗಿ ಪಾದಚಾರಿ ಮಾರ್ಗಗಳನ್ನು ಮೊದಲೇ ತೆರವುಗೊಳಿಸಿದರೆ ಬೀದಿ ಬದಿ ವ್ಯಾಪಾರ ಮಾಡಿಕೊಂಡು ಜೀವನ ಕಟ್ಟಿಕೊಂಡಿರುವವರಿಗೂ ತೊಂದರೆಯಾಗುತ್ತಿರಲಿಲ್ಲ.
ಸರ್ಕಾರ ಇವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇವನಹಳ್ಳಿ ತಾಲ್ಲೂಕಿನ ಬಸವಕಲ್ಯಾಣ ಬಸವ ಮಠದ



ಡಾ.ಮಹದೇವಸ್ವಾಮಿಜೀ, ಭಾರತೀಯ ಸೇವಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಹೂಡಿ ರಾಮಚಂದ್ರ, ಮುಖಂಡರಾದ ಯುವಶಕ್ತಿ ಸೂರಿ,ಜಿ.ಅನಂದ್ , ಪ್ರಶಾಂತ್ ಚಕ್ರವರ್ತಿ,ಅಮರ್, , ಮಹೇಶ್, ಶ್ರೀನಿವಾಸ್, ವೆಂಕಿ ಉಪಸ್ಥಿತರಿದ್ದರು.

# ವಿಶ್ವ ಕುದಿಯುವಿಕೆಯಿಂದ ಪಾರಾಗುವಿಕೆ ದೊಡ್ಡ ಸವಾಲು : ಪರತಾಪೂರೆ




**ಬಸವಕಲ್ಯಾಣ:** ಜಾಗತಿಕ ತಾಪಮಾನ ಮೀರಿ ಉಷ್ಣತೆ ಉಲ್ಬಣಗೊಂಡು ಇಡೀ ವಿಶ್ವವೇ ಕುದಿಯುವಿಕೆಯಿಂದ ಬಳಲುತ್ತಿದೆ ಎಂದು ನಿವೃತ್ತ ಪ್ರಾಧ್ಯಾಪಕ ಪ್ರೊ ಸಿ.ಬಿ. ಪರತಾಪೂರೆ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಿಂದ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಸೋಮವಾರ ಆಯೋಜಿಸಿದ್ದ 'ಶಿಕ್ಷಣ, ಮೌಲ್ಯ ಮತ್ತು ಯಶಸ್ಸು ' ಕುರಿತು ಉಪನ್ಯಾಸ ಮತ್ತು ಬಿಕಾಂ 6ನೇ ಸೆಮಿಸ್ಟರ್ ವಿದ್ಯಾರ್ಥಿಗಳ ಬೀಳ್ಕೊಡುಗೆ
ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪ್ರಕೃತಿ ವಿಕೋಪದ ಪರಿಣಾಮ ಈ ಕಾಲದಲ್ಲಿ ಅತ್ಯಂತ ಭೀಕರವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.ಭಾರತದಲ್ಲಿ ಆರ್ಥಿಕತೆ ಸೇರಿ ಹಲವು ಕ್ಷೇತ್ರಗಳಲ್ಲಿ ಹೊಸ ಸವಾಲುಗಳು ಎದುರಾಗುತ್ತಿವೆ. ಅದರ ಕುರಿತು ಆಳದ ಅಧ್ಯಯನ ಮತ್ತು ಸಂಶೋಧನೆ ಅಗತ್ಯ.

ಪಠ್ಯದ ಓದುವಿಕೆ ಇಡೀ ಸಮಾಜದ ಓದುವಿಕೆಯೂ ಆಗಿರುತ್ತದೆ. ಹಲವು ಸಂದಿಗ್ಧ ಸಂದರ್ಭ ಎದುರಿಸು ಎದೆಗಾರಿಕೆ ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು. ಹಲವು ಜ್ಞಾನ ಶಾಖೆಗಳು ಓದುವ ನಮ್ಮ ವಿದ್ಯಾರ್ಥಿಗಳಿಗೆ ನೈತಿಕ ಶಿಕ್ಷಣ ಪಠ್ಯವಾಗಬೇಕಾದ ಅಗತ್ಯವಿದೆ ಎಂದರು.ವೈದ್ಯ ಡಾ. ಅಭಯ ಸಮದರೆ ಮಾತನಾಡಿ, ಈ ಕಾಲಘಟ್ಟದಲ್ಲಿ ಎಲ್ಲರಿಗೂ ಎಲ್ಲೆಡೆಯೂ ಆರೋಗ್ಯ ಕಾಪಾಡುವ ಮತ್ತು ರೋಗಗಳಿಂದ ರಕ್ಷಣೆ ಪಡೆದುಕೊಳ್ಳುವ ಸವಾಲು ದೊಡ್ಡದಾಗಿದೆ. ವ್ಯಕ್ತಿಯ ಜೀವನ ಶೈಲಿ, ಆಹಾರಕ್ರಮ, ಆಲೋಚನೆಗಳು, ಒಳ-ಹೊರಗಿನ ಒತ್ತಡಗಳು ಮನುಷ್ಯನ ಆರೋಗ್ಯ ನಿರ್ಧರಿಸುತ್ತವೆ. ಎಲ್ಲರಲ್ಲೂ ಆರೋಗ್ಯ ಪ್ರಜ್ಞೆ ಮೂಡುವುದೇ ಸಮಾಜಿಕ ಬೆಳವಣಿಗೆಯ ರಹದಾರಿ ಎಂದರು.
ವೈದ್ಯ ಡಾ. ಶರಣ್ ದೇಶಮುಖ್ ಮಾತನಾಡಿ, ಮನಸ್ಸು ಮತ್ತು ದೇಹ ಎರಡೂ ಕ್ರಿಯಾಶೀಲತೆಯಿಂದ ಇಡುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ. ನಿರಂತರ ಓದು, ಸತ್ವಯುತ ಆಹಾರ, ಒಳ್ಳೆಯ ಯೋಚನೆ, ಸುತ್ತಲಿನ ನೈರ್ಮಲ್ಯ ಇವೆಲ್ಲವು ನಮ್ಮ ಆರೋಗ್ಯ ನಿರ್ಧರಿಸುತ್ತವೆ. ರೋಗ ಬಾರದ ದಾರಿಯ ಅರಿವು ಎಲ್ಲರಲ್ಲಿ ಬೆಳೆಯಲಿ ಎಂದು ಆಶಿಸಿದರು.ಪ್ರಾಚಾರ್ಯ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಧಾವಂತದ ಕಾಲಘಟ್ಟದಲ್ಲಿ ಬದುಕುತ್ತಿರುವ ನಮಗೆ ಪರಿಸರ,ಕಾಡು, ಹಕ್ಕಿಗಳು,ನೆಲ ಏನನ್ನೋ ಹೇಳುತ್ತಿರುತ್ತವೆ. ಇವೆಲ್ಲ ಕೇಳುವ ವ್ಯವಧಾನ, ತಾಳ್ಮೆ ನಮ್ಮಲ್ಲಿ ಬರಬೇಕಾದ ಶಿಕ್ಷಣ ಇಂದು ಅಗತ್ಯವಿದೆ. ಫೋಟೋಗ್ರಾಫಿ, ಕುಸುರಿ ಕಲೆ ಸೇರಿ ಈ ಕಾಲದ ತಂತ್ರಜ್ಞಾನದ ಕೆಲಸಗಳಲ್ಲೂ ಪ್ರಯೋಗಶೀಲತೆ ಇದ್ದರೆ ಅದಕ್ಕೊಂದು ವಿಶೇಷ ಮೌಲ್ಯ ಬರುತ್ತದೆ ಎಂದರು.

ಬಿಡಿಪಿಸಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಕುರಕೋಟೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಿಡಿಪಿಸಿ ಅಧ್ಯಕ್ಷ ಅನಿಲಕುಮಾರ ರಗಟೆ, ಕೋಶಾಧ್ಯಕ್ಷ ಜಗನ್ನಾಥ ಖೂಬಾ, ಕಾರ್ಯದರ್ಶಿ ಅಶೋಕ ನಾಗರಾಳೆ, ಸಹಕಾರ್ಯದರ್ಶಿ ಸುನಿಲಕುಮಾರ ರಾಯವಾಡೆ, ನಿರ್ದೇಶಕರಾದ ಬಸವರಾಜ ಕೋರಕೆ, ವೀರಣ್ಣ ಹಲಶೆಟ್ಟೆ, ವಿವೇಕಾನಂದ ಹೊದಲೂರೆ, ಸುನೀಲ ಹೊಳಕುಂದೆ, ಪುಷ್ಪಾವತಿ ಮಾಮಾ, ಅಧ್ಯಾಪಕರಾದ ರೋಶನ್ ಬಿ, ವಿವೇಕಾನಂದ ಶಿಂಧೆ, ಶ್ರೀನಿವಾಸ ಉಮಾಪುರೆ, ಜಗದೇವಿ ಜವಳಗೆ, ಪ್ರಿಯಾ ಚೌಹಾಣ್, ನಾಗರಾಜ್ ನಾಸೆ, ಕೃಷ್ಣ ಗೌಳಿ, ಪ್ರವೀಣ್ ಬಿರಾದಾರ ಇದ್ದರು.
ಗಂಗಾಧರ ಸಾಲಿಮಠ ಸ್ವಾಗತಿಸಿದರು. ಸಂಗೀತಾ ಮಹಾಗಾವೆ ನಿರೂಪಿಸಿದರು .
ಪ್ರಭಾಕರ ನವಗಿರೆ ವಂದಿಸಿದರು.

# ಕರ್ನಾಟಕ ರಕ್ಷಣಾ ವೇದಿಕೆಯ ಬೀದರ ಜಿಲ್ಲಾ ಉಪಾಧ್ಯಕ್ಷರಾಗಿ ಚಂದ್ರಕಾಂತ ಹೆಗಡೆ ನೇಮಕ



**ಬೀದರ, ಜು. 29:** ಕರ್ನಾಟಕ ರಕ್ಷಣಾ ವೇದಿಕೆ (ಸ್ವಾಭಿಮಾನ ಬಣ) ಬೀದರ ಜಿಲ್ಲಾ ಘಟಕದ ಜಿಲ್ಲಾ ಉಪಾಧ್ಯಕ್ಷರಾಗಿ ಚಂದ್ರಕಾಂತ ಶರಣಪ್ಪ ಹೆಗಡೆ ಅವರನ್ನು ನೇಮಕ ಮಾಡಲಾಗಿದೆ.
ನಗರದ ಹಬ್ಸಿಕೋಟ್ ಅತಿಥಿ ಗೃಹದಲ್ಲಿ ಶನಿವಾರ ನಡೆದ ಕರ್ನಾಟಕ ರಕ್ಷಣಾ ವೇದಿಕೆ (ಸ್ವಾಭಿಮಾನ ಬಣ) ಜಿಲ್ಲಾ ಘಟಕದ ಸಭೆಯಲ್ಲಿ ಈ ನೇಮಕಾತಿ ಮಾಡಲಾಗಿದ್ದು, ಜಿಲ್ಲಾ ಅಧ್ಯಕ್ಷ ಚರಣಜೀತ ಆಣದೂರೆ ಅವರು ನೇಮಕಾತಿ ಆದೇಶವನ್ನು ಪ್ರಕಟಿಸಿದ್ದಾರೆ.ಚಂದ್ರಕಾಂತ ಹೆಗಡೆ ಅವರು ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಿದ್ದು, ಜಿಲ್ಲೆಯಾದ್ಯಂತ ಸಂಘಟನೆಯ ಚಟುವಟಿಕೆಗಳನ್ನು ವಿಸ್ತರಿಸಲು ಶ್ರಮಿಸಲಿದ್ದಾರೆ ಎಂದು ಅಧ್ಯಕ್ಷರು ತಿಳಿಸಿದ್ದಾರೆ.
ಸಭೆಯಲ್ಲಿ ಬಾಲಾಜಿ ಪಾಟೀಲ, ಚಂದು ಗುಪ್ತಾ, ಮಹಾದೇವ ಕಾರ್ಲೆಕರ್, ಸುನೀಲ ಕಾರ್ಲೇಕರ್, ಖಮರ್ ಮುಲ್ಲಾ, ಸಚಿನ್ ಹೆಗಡೆ, ದಿನೇಶ್ ಹೆಗಡೆ, ಶಶಿಕಾಂತ ಹೆಗಡೆ, ಧನರಾಜ ಸಾಂಗ್ವಿಕರ್, ರಾಕೇಶ್ ದಂಡಿ, ನಿತೀಶ್ ಸಕ್ವಾಲ್, ಆನಂದ ಹಾಗೂ ನಿಖಿಲ್ ಕಾರಂಜೆ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE